## ಶ್ರೀ ಜಿ.ಎಸ್.ಬಸವರಾಜ್, ತುಮಕೂರು ಲೋಕಸಭಾ ಸದಸ್ಯರು ಇವರ ಅಧ್ಯಕ್ಷತೆಯಲ್ಲಿ ದಿ:30-06-2020 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ದಿಶಾ ಸಮಿತಿ ಸಭೆಯ ನಡವಳಿಗಳು

*** *** ***

**ಹಾಜರಿ : ಹಾಜರಾತಿ ವಹಿಯಲ್ಲಿದ್ದಂತೆ**

******

ನಾಡಗೀತೆಯೊಂದಿಗೆ ಸಭೆಯು ಆರಂಭವಾಯಿತು. ಸಭೆಯ ಆರಂಭದಲ್ಲಿ ಮಾನ್ಯ ಯೋಜನಾ ನಿರ್ದೇಶಕರು ಮಾತನಾಡಿ, ಸಭೆಯ ಮಾನ್ಯ ಅಧ್ಯಕ್ಷರು, ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಜಿಲ್ಲಾ ಪಂಚಾಯತ್, ಮಾನ್ಯ ಜಿಲ್ಲಾಧಿಕಾರಿಯವರು, ಮಾನ್ಯ ಪೌರಾಯುಕ್ತರು, ಮಾನ್ಯ ವಿಧಾನಪರಿಷತ್ ಸದಸ್ಯರು, ಎಲ್ಲಾ ಮಾನ್ಯ ಸದಸ್ಯರುಗಳು, ವಿವಿಧ ಇಲಾಖೆಗಳ ಜಿಲ್ಲಾ/ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಪತ್ರಿಕಾ/ದೃಶ್ಯ ಮಾಧ್ಯಮದವರುಗಳನ್ನು ಸಭೆಗೆ ಹೃತ್ಪೂರ್ವಕವಾಗಿ ಸ್ವಾಗತಿಸಿ, ಸಭೆಯನ್ನು ನಡೆಸಿಕೊಡುವಂತೆ ಸಮಿತಿಯ ಮಾನ್ಯ ಅಧ್ಯಕ್ಷರನ್ನು ಕೋರಿದರು.

ಸಭೆಯ ಮಾನ್ಯ ಅಧ್ಯಕ್ಷರು ವಿಷಯ ಸೂಚಿಯನ್ವಯ ಚರ್ಚೆಯನ್ನು ಪ್ರಾರಂಭಿಸಿದರು.

**1. ದಿನಾಂಕ 21-10-2019 ಮತ್ತು ದಿನಾಂಕ 28-02-2020ರಂದು ನಡೆದ ದಿಶಾ ಸಮಿತಿ ಸಭೆಯ ನಡವಳಿಗೆ ಅನುಪಾಲನಾ ವರದಿ ಅನುಮೋದನೆ;**

ದಿನಾಂಕ 21-10-2019 ಮತ್ತು ದಿನಾಂಕ 28-02-2020ರಂದು ನಡೆದ ದಿಶಾ ಸಮಿತಿ ಸಭೆಯ ನಡವಳಿಗಳಿಗೆ ಸಂಬಂಧಿಸಿದಂತೆ ಕ್ರಮವಹಿಸಲಾಗಿರುವ ಕುರಿತು ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಲ್ಲಿಸಿದ್ದ ಅನುಪಾಲನಾ ವರದಿಯನ್ನು ಸಭೆಯು ಕೂಲಂಕುಷವಾಗಿ ಪರಿಶೀಲಿಸಿತು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ನಡವಳಿ ಪ್ರಕಾರ ಕೆಲವು ವಿಷಯಗಳಿಗೆ ಮಾಹಿತಿ ನೀಡಿಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದರು.

ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಯೋಜನಾ/ಕಾರ್ಯಕ್ರಮವಾರು, ಫಲಾನುಭವಿವಾರು ವಿವರವಾದ ಮಾಹಿತಿಯನ್ನು ನಮೂದಿಸಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು. ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ತಿಪ್ಪೇಸ್ವಾಮಿಯವರು ಮಾತನಾಡಿ, ಇಲಾಖಾ ಯೋಜನೆಗಳ ಕುರಿತು ಜಿ.ಐ.ಎಸ್.ತಂತ್ರಾಂಶದಲ್ಲಿ ಮಾಹಿತಿಯನ್ನು ಆರೋಹಿಸಿರುವ ಕುರಿತು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಮಾಹಿತಿ ನೀಡಿದರೆ ಅನುಪಾಲನೆಗೆ ಅನುಕೂಲವಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಭೆಯಲ್ಲಿ ಉಪಸ್ಥಿತರಿದ್ದ KSRSAC, ಬೆಂಗಳೂರು ಅಧಿಕಾರಿಯವರು ಮಾತನಾಡಿ, 164 ಪದರಗಳಿಗೆ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದ ಮೇರೆಗೆ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ, ವರ್ಷವಾರು/ಯೋಜನಾವಾರು ಮಾಹಿತಿ ಸಲ್ಲಿಸಬೇಕೆಂದು ತಿಳಿಸಿದರು. ಅದರಂತೆ, KSRSAC, ಬೆಂಗಳೂರು ಅಧಿಕಾರಿಯವರು ಮಾಹಿತಿ ವಿವರಿಸಿದರು.

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ತಿಪ್ಪೇಸ್ವಾಮಿಯವರು ಮಾತನಾಡಿ, ಕಳೆದ ಸಭೆಯ ತೀರ್ಮಾನದಂತೆ ಜಿ.ಐ.ಎಸ್.ನಲ್ಲಿ ಯಾವ ಯಾವ ಇಲಾಖೆ ವತಿಯಿಂದ ಎಷ್ಟು ಯೋಜನೆಗಳನ್ನು ಕಾಲೋಚಿತಗೊಳಿಸಲಾಗಿದೆ ಮತ್ತು ಇನ್ನೂ ಎಷ್ಟು ಯೋಜನೆಗಳನ್ನು ಕಾಲೋಚಿತಗೊಳಿಸಬೇಕಾಗಿದೆ ಎಂಬ ಕುರಿತು ಇಲಾಖಾವಾರು ಸ್ಪಷ್ಟ ಮಾಹಿತಿ ಸಲ್ಲಿಸಬೇಕೆಂದು ತಿಳಿಸಿದರು. ಮುಂದುವರೆದು ಮಾತನಾಡುತ್ತಾ, ಈ ಕುರಿತು ಉಸ್ತುವಾರಿ ಅಧಿಕಾರಿಗಳನ್ನು ನೇಮಕ ಮಾಡಬೇಕೆಂದು ಅಭಿಪ್ರಾಯ

ವ್ಯಕ್ತಪಡಿಸಿದರು. ಪೂರಕವಾಗಿ, ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್ ರವರು ಸಹಮತ ವ್ಯಕ್ತಪಡಿಸಿದರು.

ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ, ಮುಂದಿನ ಎರಡು ವಾರದೊಳಗಾಗಿ ಎಲ್ಲಾ ಇಲಾಖೆಗಳು ಎಲ್ಲಾ ಯೋಜನೆಗಳ ಮಾಹಿತಿಯನ್ನು ಜಿ.ಐ.ಎಸ್.ನಲ್ಲಿ ಕಾಲೋಚಿತಗೊಳಿಸಬೇಕೆಂದು ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಉಪಸ್ಥಿತರಿದ್ದ KSRSAC, ಬೆಂಗಳೂರು ಅಧಿಕಾರಿಯೊಬ್ಬರು ಮಾತನಾಡಿ, ನೀಡಿರುವ ಮಾಹಿತಿಯಲ್ಲಿ ಸರ್ವೆ ನಂಬರ್ ಹಾಗೂ ಅಕ್ಷಾಂಶ (Latitude)/ ರೇಖಾಂಶ (Longitude) ಹೊಂದಾಣಿಕೆಯಾಗದ ಕಾರಣ ನಿಖರ ಮಾಹಿತಿ (ಡಾಟಾ) ಆರೋಹಣಗೊಳಿಸಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿದರು. ಪ್ರತಿಯಾಗಿ ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟ ಅಧಿಕಾರಿಗಳು ಪರಸ್ಪರ ಸಹಕಾರದಿಂದ ಇಲಾಖಾ ಯೋಜನೆಗಳನ್ನು ಜಿ.ಐ.ಎಸ್.ನಲ್ಲಿ ಕಾಲೋಚಿತಗೊಳಿಸುವ ಕುರಿತು ಹಿಂಬಾಲಿಸಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ತಿಪ್ಪೆಸ್ವಾಮಿಯವರು ಮಾತನಾಡಿ, ಉಳಿದೆಲ್ಲಾ ಇಲಾಖೆಯವರೂ ಸಹ ಇದೇ ರೀತಿ ಎಲ್ಲಾ ಯೋಜನೆಗಳ ಮಾಹಿತಿಯನ್ನು ಜಿ.ಐ.ಎಸ್. ನಲ್ಲಿ ಕಾಲೋಚಿತಗೊಳಿಸಲೇಬೇಕು ಎಂದು ಸಭೆಗೆ ತಿಳಿಸಿದರು. ಹಾಗೂ ಎಲ್ಲಾ ಇಲಾಖೆಗಳ ಇಲಾಖಾ ಮುಖ್ಯಸ್ಥರೇ ಉಸ್ತುವಾರಿ ಅಧಿಕಾರಿಯಾಗಿ, ಉತ್ತಮ ತಾಂತ್ರಿಕ ಅನುಭವವುಳ್ಳ ಹಿರಿಯ ಅಧಿಕಾರಿಯನ್ನು ಸಂಯೋಜಕರನ್ನಾಗಿ(ಕೋ-ಆರ್ಡಿನೇಟರ್)ನೇಮಿಸಿಕೊಂಡು, ಖುದ್ದು ಗಮನಹರಿಸಿ ಮುಂದಿನ 10 ದಿನಗಳೊಳಗಾಗಿ ಎಲ್ಲಾ ಯೋಜನೆಗಳ ಮಾಹಿತಿಯನ್ನು ಜಿ.ಐ.ಎಸ್.ನಲ್ಲಿ ಕಡ್ಡಾಯವಾಗಿ ಕಾಲೋಚಿತಗೊಳಿಸಬೇಕು ಎಂದು ತಿಳಿಸಿದರು.

ಈ ಮಾತಿಗೆ ಮಾನ್ಯ ಜಿಲ್ಲಾಧಿಕಾರಿಯವರು ಸಹಮತ ವ್ಯಕ್ತಪಡಿಸಿ, ಎಲ್ಲಾ ಇಲಾಖೆಯ ಅಧಿಕಾರಿಗಳು KSRSAC, ಬೆಂಗಳೂರು ರವರಿಗೆ ಅಗತ್ಯ ಮಾಹಿತಿ ಒದಗಿಸಿ, ತ್ವರಿತವಾಗಿ ಕಾಲೋಚಿಗೊಳಿಸಲು ಕ್ರಮವಹಿಸಿ ಮುಂದಿನ ಸಭೆಯ ಹೊತ್ತಿಗೆ ಒಂದು ಹಂತಕ್ಕೆ ತರಲೇಬೇಕು ಎಂದು ಅಧಿಕಾರಿಗಳಿಗೆ ಕಟ್ಟು-ನಿಟ್ಟಾಗಿ ಸೂಚಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಗ್ರಾಮ ಪಂಚಾಯತಿಗಳಲ್ಲಿ ಗ್ರಾಮವಾರು ಹಾಗೂ ಪಂಚಾಯಿತಿವಾರು ಮತ್ತು ನಗರ ಪ್ರದೇಶಗಳಲ್ಲಿ ಬಡಾವಾಣಿವಾರು ಹಾಗೂ ವಾರ್ಡ್‌ವಾರು ಮಾಹಿತಿಯನ್ನು ನಮೂದಿಸಬೇಕು(ತೋರಿಸಬೇಕು). ಹಳೆಯ ಮಾಹಿತಿಗೆ ಒಂದು ಬಣ್ಣ, ಹೊಸ ಮಾಹಿತಿಗೆ ಮತ್ತೊಂದು ಬಣ್ಣ ನೀಡಬೇಕು ಎಂದು KSRSAC ಅಧಿಕಾರಿಯವರಿಗೆ ಸಲಹೆ ನೀಡಿದರು.

**ಅಂತಿಮವಾಗಿ ದಿನಾಂಕ 21-10-2019 ಮತ್ತು ದಿನಾಂಕ 28-02-2020ರಂದು ನಡೆದ ದಿಶಾ ಸಭೆಯ ನಡವಳಿಗಳಿಗೆ ಸಂಬಂಧಿಸಿದಂತೆ ಕ್ರಮ ವಹಿಸಲಾಗಿರುವ ಕುರಿತು ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಲ್ಲಿಸಿದ್ದ ಅನುಪಾಲನಾ ವರದಿಯನ್ನು ಸಭೆಯು ಸರ್ವಾನುಮತದಿಂದ ಅಂಗೀಕರಿಸಿತು**

**2. ಮೇ-2020ರ ಅಂತ್ಯದವರೆಗೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ:**

**1. ಕೃಷಿ ಇಲಾಖೆ:**

ಜಂಟಿ ಕೃಷಿ ನಿರ್ದೇಶಕರು ಮಾತನಾಡಿ, ಇಲಾಖಾ ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಸೋಯಿಂಗ್ ಕ್ಲೈಮ್ಸ್ ಬಗ್ಗೆ ಜನರಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು; ಕುಣಿಗಲ್, ಕೊರಟಗೆರೆ ಮತ್ತು ತುಮಕೂರು ತಾಲ್ಲೂಕುಗಳಲ್ಲಿ ಹೆಚ್ಚಿನ

ನೋಂದಣಿಗೆ ಕ್ರಮವಹಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರಿಗೆ ತಿಳಿಸಿದರು. ಮುಂದುವರೆದು ಮಾತನಾಡುತ್ತಾ, ಬ್ಯಾಂಕುಗಳಲ್ಲಿ ಸಾಲ ಪಡೆದಿರುವ(ಲೋನಿ ಫಾರ್ಮರ್ಸ್) ಬಗ್ಗೆ ಹೆಚ್ಚಿನ ಗಮನಹರಿಸಬೇಕೆಂದು ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನ ವ್ಯವಸ್ಥಾಪಕರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಪ್ರಧಾನ ಮಂತ್ರಿ ಕಿಸಾನ್ ಯೋಜನೆಯಡಿ ಸೌಲಭ್ಯ ವಂಚಿತರಾಗುವ ರೈತ ಫಲಾನುಭವಿಗಳಿಗೆ ಅನ್ಯಾಯವಾಗುವುದರಿಂದ ಈ ಕುರಿತು ಗಂಭೀರವಾಗಿ ಪರಿಗಣಿಸಿ, ಅಗತ್ಯ ಕ್ರಮವಹಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರಿಗೆ ತಿಳಿಸಿದರು.

ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಫಸಲ್ ಭೀಮಾ ಯೋಜನೆಯಡಿ ಕರಪತ್ರಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಮಾಡಿಸಿ, ಯೋಜನೆಯ ಕುರಿತು ಉತ್ತಮ ರೀತಿಯಲ್ಲಿ ಪ್ರಚುರಪಡಿಸಬೇಕೆಂದು ತಿಳಿಸಿದರು. ಮುಂದುವರೆದು ಮಾತನಾಡುತ್ತಾ, ಸೋಯಿಂಗ್ ಬಗ್ಗೆ ತಿಪಟೂರು ತಾಲ್ಲೂಕಿಗೆ ಸಂಬಂಧಪಟ್ಟಂತೆ ದಿನಪತ್ರಿಕೆಯಲ್ಲಿ ಪ್ರಕಟವಾಗಿರುವ ಕುರಿತು ಸಭೆಯ ಗಮನ ಸೆಳೆದರು.

ಪ್ರತಿಯಾಗಿ ಜಂಟಿ ಕೃಷಿ ನಿರ್ದೇಶಕರು ಮಾತನಾಡಿ, ಸುದ್ದಿಯ ಕುರಿತು ಸಭೆಗೆ ಸಕಾರಣವನ್ನು ತಿಳಿಸಿದರು. ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ದೂರುಗಳ ಕುರಿತು ಆಗಿಂದಾಗ್ಗೆ ಪರಿಶೀಲಿಸಬೇಕೆಂದು ಇಲಾಖಾಧಿಕಾರಿಯವರಿಗೆ ತಿಳಿಸಿದರು.

**ಮಣ್ಣು ಪರೀಕ್ಷಾ ಪ್ರಯೋಗಾಲಯ:-** ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಕುರಿತು ಪ್ರಸ್ತಾಪಿಸಿ, ಪದವೀಧರ ನಿರುದ್ಯೋಗಿಗಳು ಮಣ್ಣು ಪರೀಕ್ಷಾ ಪ್ರಯೋಗಾಲಯಗಳನ್ನು ನಡೆಸಲು ಅವಕಾಶ ಕಲ್ಪಿಸಿಕೊಡಬೇಕೆಂದು ಜಂಟಿ ಕೃಷಿ ನಿರ್ದೇಶಕರನ್ನು ಕೋರಿದರು. ಈ ಮಾತಿಗೆ ಸಭೆಯ ಮಾನ್ಯ ಅಧ್ಯಕ್ಷರು ಮತ್ತು ಜಿಲ್ಲಾಧಿಕಾರಿಯವರು ಸಹಮತ ವ್ಯಕ್ತಪಡಿಸಿದರು.

**ಮೊಬೈಲ್ ಮಣ್ಣು ಪರೀಕ್ಷಾ ಕೇಂದ್ರ:-** ಜಿಲ್ಲಾಧಿಕಾರಿಯವರು ಮಾತನಾಡಿ, ಮೊಬೈಲ್ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಮಣ್ಣು ಪರೀಕ್ಷೆ ಮಾಡಲು ಅವಕಾಶ ಕಲ್ಪಿಸಿದಲ್ಲಿ ಹೆಚ್ಚಿನ ಪರೀಕ್ಷೆ ನಡೆಸಲು ಸಾಧ್ಯವಾಗುವುದು, ಈ ನಿಟ್ಟಿನಲ್ಲಿ ಕ್ರಮ ವಹಿಸಲು ತಿಳಿಸಿ ಅನುದಾನಕ್ಕೆ ಯಾವುದೇ ಸಮಸ್ಯೆ ಇಲ್ಲವೆಂದೂ ಸಭೆಯ ಗಮನಕ್ಕೆ ತಂದರು. ಪ್ರತಿಯಾಗಿ ಇಲಾಖಾಧಿಕಾರಿಯವರು ಮಾತನಾಡಿ, ಈ ಕುರಿತು ಪರಿಶೀಲಿಸುವುದಾಗಿ ಸಭೆಗೆ ಭರವಸೆಯಿತ್ತರು.

**ಕೃಷಿ ಕಾಲೇಜು ಸ್ಥಾಪನೆ:-** ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ತಿಪ್ಪೇಸ್ವಾಮಿಯವರು ಮಾತನಾಡಿ, ಹೇಮಾವತಿ ನಾಲಾ ನೀರು ಹರಿಯುವೆಡೆ ಕೃಷಿಗೆ ಹೆಚ್ಚಿನ ಒತ್ತು ನೀಡಬೇಕು ಮತ್ತು ಜಿಲ್ಲೆಯಲ್ಲಿ ಕೃಷಿ ಕಾಲೇಜು ತೆರೆಯಬೇಕು ಎಂದು ಸಲಹೆಯಿತ್ತರು. ಪೂರಕವಾಗಿ, ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಶಿರಾ ತಾಲ್ಲೂಕಿನಲ್ಲಿ ಕೃಷಿ ಕಾಲೇಜು ತೆರೆಯುವ ಬಗ್ಗೆ ಈ ಹಿಂದೆ ಚರ್ಚೆಯಾಗಿತ್ತು, ಕುಣಿಗಲ್ ತಾಲ್ಲೂಕಿನಲ್ಲಿ ಕೃಷಿ ಕಾಲೇಜಿನ ವಿಸ್ತರಣಾ ಕೇಂದ್ರವಿದೆ, ಕೃಷಿ ವಿಶ್ವವಿದ್ಯಾನಿಲಯದ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಮಾಹಿತಿ ಪಡೆಯುವುದು ಸೂಕ್ತ ಎಂದು ಸಲಹೆ ನೀಡಿದರು. ಮಾನ್ಯ ಅಧ್ಯಕ್ಷರು ಮುಂದಿನ ಸಭೆಯ ವೇಳೆಗೆ ಮಾಹಿತಿ ಸಂಗ್ರಹಿಸಲು ಸೂಚಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಕೃಷಿ ಭೂಮಿ ವಿಸ್ತೀರ್ಣ ಹೆಚ್ಚಳವಾಗುತ್ತಿಲ್ಲವೆಂದು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಪ್ರತಿಯಾಗಿ ಸಭೆಯ ಮಾನ್ಯ ಅಧ್ಯಕ್ಷರು ಮತ್ತು ಜಿಲ್ಲಾಧಿಕಾರಿಯವರು ಮಾತನಾಡಿ, ಈ ಬಗ್ಗೆ ಮುಂದಿನ ಸಭೆಗೆ ಮಾಹಿತಿ ನೀಡುವ ಭರವಸೆಯಿತ್ತರು.

**[ಕ್ರಮ: ಜಂಟಿ ಕೃಷಿ ನಿರ್ದೇಶಕರು/ ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ]**

ಜಿ.ಪಂ. ಅಧ್ಯಕ್ಷ

2. ನೀರಾವರಿ:

**ಇಸ್ರೇಲ್ ಮಾದರಿ ಮೈಕ್ರೋ ಇರ್ರಿಗೇಷನ್:-** ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಯವರು ಮಾತನಾಡಿ, ಜಿಲ್ಲೆಯಲ್ಲಿ ಪ್ರಸ್ತುತ 117050 ಹೆಕ್ಟೇರ್ ಪ್ರದೇಶವು ಹೇಮಾವತಿ ನಾಲಾ ವಲಯ ವ್ಯಾಪ್ತಿಗೊಳಪಟ್ಟಿದ್ದು, ನಾಲಾ ನೀರಿನ ಸಾಮರ್ಥ್ಯವನ್ನು ಪರಿಗಣಿಸಿ, ಈ ಪೈಕಿ 11050 ಹೆಕ್ಟೇರ್ ಪ್ರದೇಶವನ್ನು ಅಚ್ಚುಕಟ್ಟು ಪ್ರದೇಶವೆಂದು ಆಯ್ಕೆ ಮಾಡಲಾಗಿದೆ. ಹೇಮಾವತಿಯಿಂದ ಅಚ್ಚುಕಟ್ಟು ಪ್ರದೇಶಗಳಿಗೆ ಫ್ಲಡ್ ಇರ್ರಿಗೇಷನ್ ಮಾಡುತ್ತಿದ್ದು, ಮಾನ್ಯ ಅಧ್ಯಕ್ಷರು ಇಸ್ರೇಲ್ ಮಾದರಿ ಮೈಕ್ರೋ ಇರ್ರಿಗೇಷನ್ ಮಾಡುವ ಮೂಲಕ ಉಳಿತಾಯವಾಗುವ ನೀರನ್ನು ಅಚ್ಚುಕಟ್ಟು ವ್ಯಾಪ್ತಿಯ ಕೆರೆಗಳಿಗೆ ಅಲೋಕೇಷನ್ ಮಾಡಲು ಸೂಚಿಸಿರುವುದರಿಂದ ಇಲಾಖೆ ಕನ್ಸಲ್‌ಟೆನ್ಸಿ ಮುಖಾಂತರ ಅಧ್ಯಯನ ಕೈಗೊಳ್ಳಲಾಗಿದ್ದು, ಈ ಬಗ್ಗೆ ಮುಂದಿನ ಸಭೆಯ ದಿನಾಂಕದೊಳಗೆ ನಿರ್ಣಯ ಕೈಗೊಂಡು ಮಾಹಿತಿ ನೀಡಲಾಗುವುದು ಎಂದು ಸಭೆಗೆ ತಿಳಿಸಿದರು.

ಸಮಿತಿಯ ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಇಸ್ರೇಲ್ ಮಾದರಿ ಮೈಕ್ರೋ ಇರ್ರಿಗೇಷನ್ ಪದ್ದತಿಯನ್ನು ಹೇಮಾವತಿ ವ್ಯಾಪ್ತಿಯ ಪ್ರದೇಶದ ಜೊತೆಗೆ ಜಿಲ್ಲೆಯ ಎಲ್ಲಾಭಾಗಕ್ಕೂ ಮಾಡಲು ಎಷ್ಟು ನೀರಿನ ಅಗತ್ಯವಿದೆ ಎಂಬ ಬಗ್ಗೆ ಅಧ್ಯಯನ ಮಾಡಿ ವಿವರವಾದ ಯೋಜನಾವರದಿ ಮಾಡುವುದು ಅಗತ್ಯವಾಗಿದೆ ಎಂದು ಸಲಹೆ ನೀಡಿದರು.

ಮಾನ್ಯ ಅಧ್ಯಕ್ಷರು ಮತ್ತು ಮಾನ್ಯ ಜಿಲ್ಲಾಧಿಕಾರಿಗಳು ಮಾತನಾಡಿ ಮೊದಲ ಹಂತದಲ್ಲಿ ಹೇಮಾವತಿ ವ್ಯಾಪ್ತಿ ಮತ್ತು ಎರಡನೇ ಹಂತದಲ್ಲಿ ಜಿಲ್ಲೆಯ ಎಲ್ಲಾಭಾಗಕ್ಕೂ ಮೈಕ್ರೋ ಇರ್ರಿಗೇಷನ್ ಪದ್ದತಿಯನ್ನು ಅಳವಡಿಸಲು ಅಗತ್ಯವಿರುವ ನದಿ ನೀರಿನ ಮಾಹಿತಿಯನ್ನು ನೀಡಲು ಸೂಚಿಸಿದರು.

**ಮೈಕ್ರೋ ಇರ್ರಿಗೇಷನ್ ಪದ್ಧತಿ ಸಮನ್ವಯ ಸಮಿತಿ:-** ಮೈಕ್ರೋ ಇರ್ರಿಗೇಷನ್ ಪದ್ಧತಿ ಬಗ್ಗೆ ವರದಿ ತಯಾರಿಸುವ ಮುನ್ನ ಒಂದು ಕಾವೇರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ನೇತ್ರತ್ವದಲ್ಲಿ ಸಮಿತಿ ರಚನೆ ಮಾಡಿಕೊಂಡು ಕ್ರಮ ವಹಿಸಬೇಕೆಂದು ಮಾನ್ಯ ಅಧ್ಯಕ್ಷರು ತಿಳಿಸಿದರು. ಮುಂದುವರೆದು ಮಾತನಾಡುತ್ತಾ, ಮುಖ್ಯ ಇಂಜಿನಿಯರ್ ಹೇಮಾವತಿ ನಾಲಾ ವಲಯ, ಮುಖ್ಯ ಇಂಜಿನಿಯರ್ ಭಧ್ರಾ ಮೇಲ್ದಂಡೆ, ಮುಖ್ಯ ಇಂಜಿನಿಯರ್ ಎತ್ತಿನಹೊಳೆ, ಜಂಟಿ ಕೃಷಿ ನಿರ್ದೇಶಕರು, ತೋಟಗಾರಿಕಾ ಉಪನಿರ್ದೇಶಕರು, ಮತ್ತು ರೇಷ್ಮೆ ಉಪನಿರ್ದೇಶಕರು ಎಲ್ಲರೂ ಕಲೆತು, ಸಮಾಲೋಚಿಸಿ ಕ್ರಮವಹಿಸಬೇಕು ಎಂದು ಸಲಹೆಯಿತ್ತರು. ಈ ಮಾತಿಗೆ ಮಾನ್ಯ ಜಿಲ್ಲಾಧಿಕಾರಿಯವರು ಸಹಮತ ವ್ಯಕ್ತಪಡಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಪದೇ ಪದೇ ಡಿ.ಪಿ.ಆರ್. ಮಾಡುವುದು ಬೇಡ ಎಂದು ತಿಳಿಸಿದರಲ್ಲದೆ ಮಾನ್ಯ ಮುಖ್ಯ ಮಂತ್ರಿಯವರು, ಮಾನ್ಯ ಪ್ರಧಾನ ಮಂತ್ರಿಯವರಿಗೆ ಪತ್ರ ಬರೆದು, ತುಮಕೂರು ಜಿಲ್ಲೆಯನ್ನು ನೀರಾವರಿಗೆ ವಿಶೇಷವಾಗಿ ಪರಿಗಣಿಸಬೇಕೆಂದು ಕೋರಿರುವುದರಿಂದ ಇಡೀ ಜಿಲ್ಲೆಯ ಸಾಧ್ಯತೆಗಳ ಕುರಿತು ಪರಿಶೀಲಿಸಿ, ಯೋಜನೆ ರೂಪಿಸಿ ಸರ್ಕಾರಕ್ಕೆ ಪ್ರಸ್ತಾವನೆ ಎಂದು ತಿಳಿಸಿದರು.

**ಎತ್ತಿನಹೊಳೆ ಎನ್.ಪಿ.ಪಿ. ಯೋಜನೆ:-** ಎತ್ತಿನಹೊಳೆ ಯೋಜನೆ ನಾಲಾ ವಲಯದ ಅಧಿಕಾರಿಯವರನ್ನು ಕುರಿತು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, **ಎನ್.ಪಿ.ಪಿ.** ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿರುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ? ಎಂದು ಕೇಳಿದಾಗ ಅಧಿಕಾರಿಯವರು ಮುಂದಿನ ಸಭೆಯಲ್ಲಿ ಮಾಹಿತಿ ನೀಡುವುದಾಗಿ ತಿಳಿಸಿದರು.

**ಭೈರಗೊಂಡ್ಲು ಜಲಾಶಯದ ಮೇಲ್ಭಾಗದಲ್ಲಿ ಬೆಂಗಳೂರಿನ ಘನತ್ಯಾಜ್ಯ ಘಟಕ:-** ಭೈರಗೊಂಡ್ಲು ಜಲಾಶಯದ ಮೇಲ್ಭಾಗದಲ್ಲಿ ಬೆಂಗಳೂರಿನ ಘನತ್ಯಾಜ್ಯವನ್ನು ತಂದು ಸುರಿಯುತ್ತಿದ್ದು, ಕುಡಿಯುವ ನೀರು

ಕಲುಷಿತಗೊಳ್ಳುವುದರಿಂದ ಇದನ್ನು ತಡೆಯಲು ಯಾವ ಕ್ರಮವಹಿಸಲಾಗಿದೆ? ಎಂದು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಪ್ರಶ್ನಿಸಿದರು. ಸಭೆಯ ಮಾನ್ಯ ಅಧ್ಯಕ್ಷರು ಈ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ ಪರಿಶೀಲಿಸುವಂತೆ ತಿಳಿಸಿದರು. ಈ ಕುರಿತು ಪರಿಶೀಲಿಸಿ ಮುಖ್ಯ ಇಂಜಿನಿಯರ್‌ರವರ ಗಮನಕ್ಕೆ ತಂದು ತುರ್ತು ಸಮಸ್ಯೆ ನಿವಾರಣೆಗೆ ಅಗತ್ಯ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಲು ಸಂಬಂಧಪಟ್ಟ ಇಲಾಖಾ ಅಧಿಕಾರಿಯವರಿಗೆ ತಿಳಿಸಿದರು. ಮುಂದುವರೆದು, ಘನತ್ಯಾಜ್ಯ ವಿಲೇವಾರಿ ಬಗ್ಗೆ ಈಗಾಗಲೇ ಸಭೆಗಳು ನಡೆದು ನಡವಳಿಯನ್ನು ಸಲ್ಲಿಸಲಾಗಿದೆ. ಸದರಿ ವಿಷಯವನ್ನು ಹಿಂಬಾಲಿಸಿ ಮುಂದಿನ ಸಭೆಗೆ(ದಿಶಾ ಸಮಿತಿ ಸಭೆ) ಪರಿಪೂರ್ಣ ಮಾಹಿತಿಯೊಂದಿಗೆ ತಜ್ಞರ ಸಲಹೆಗಳನ್ನು ಪಡೆದು ಸಭೆಗೆ ಹಾಜರಾಗಬೇಕೆಂದು ಇಲಾಖಾ ಅಧಿಕಾರಿಯವರಿಗೆ ತಿಳಿಸಿದರು. ಅಗತ್ಯವಿದ್ದಲ್ಲಿ ಒಂದು ಪರಿಣಿತ ತಜ್ಞರ ಸಮಿತಿಯನ್ನು ರಚಿಸಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

**ಕುಮಾರಧಾರ ಯೋಜನೆ:-** ಎತ್ತಿನಹೊಳೆ ಯೋಜನೆಯ ಕಾಲುವೆಗಳಿಗೆ ಕುಮಾರಧಾರ ನೀರನ್ನು ತರುವ ಯೋಜನೆ ಯಾವ ಹಂತದಲ್ಲಿದೆ ಎಂದು ಮಾನ್ಯ ಅಧ್ಯಕ್ಷರು ಅಧಿಕಾರಿಗಳಿಗೆ ಪ್ರಶ್ನಿಸಿದಾಗ, ಸರ್ಕಾರದಲ್ಲಿ ಯೋಜನಾ ವರದಿ ತಯಾರಿಸಲು ಟೆಂಡರ್ ಕರೆಯುವ ಹಂತದಲ್ಲಿದೆ ಎಂದಿ ಅಧಿಕಾರಿಗಳು ತಿಳಿಸಿದರು. ಶೀಘ್ರವಾಗಿ ಟೆಂಡರ್ ಕರೆಯಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

**ಭದ್ರಾ ಮೇಲ್ದಂಡೆ ಎನ್.ಪಿ.ಪಿ. ಯೋಜನೆ:-** ಭದ್ರಾಮೇಲ್ದಂಡೆ ಯೋಜನೆ ನಾಲಾ ವಲಯದ ಅಧಿಕಾರಿಯವರನ್ನು ಕುರಿತು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, **ಎನ್.ಪಿ.ಪಿ.** ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿರುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ? ಎಂದು ಕೇಳಿದಾಗ ಇಲಾಖೆಯ ಅಧಿಕಾರಿಗಳು ಭಾಗವಹಿಸಿಲ್ಲವೆಂದು ತಿಳಿಸಿದಾಗ ಮಾನ್ಯ ಅಧ್ಯಕ್ಷರು ಮಾತನಾಡಿ ಸಭೆಗೆ ಗೈರಾಗಿರುವ ಅಧಿಕಾರಿಗಳಿಗೆ ನೋಟೀಸ್ ನೀಡಲು ಸೂಚಿಸಿದರು.

**ಕೆರೆಗಳಿಗೆ ನದಿ ನೀರು:-** ತುಮಕೂರು ಜಿಲ್ಲೆಯ ಎಲ್ಲಾ ಕೆರೆಗಳನ್ನು ನದಿ ನೀರಿನಿಂದ ತುಂಬಿಸಲು ತಾಂತ್ರಿಕ ವರದಿ ಯಾವ ಹಂತದಲ್ಲಿದೆ ಎಂದು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳನ್ನು ಕೇಳಿದಾಗ ಅವರು ಸಹ ಸಭೆಗೆ ಗೈರು ಹಾಜರಾಗಿರುವುದಾಗಿ ತಿಳಿಸಿದರು.

**ಕೇಂದ್ರ ಸರ್ಕಾರಕ್ಕೆ ನೀರಾವರಿ ಪೈಲಟ್ ಯೋಜನೆ ಪ್ರಸ್ತಾವನೆ:-** ಮಾನ್ಯ ಅಧ್ಯಕ್ಷರು ಮಾತನಾಡಿ ನೀರಾವರಿ ತಜ್ಞ ಶ್ರೀ ಜಿ.ಎಸ್.ಪರಮಶಿವಯ್ಯ ಅಧ್ಯಯನ ಪೀಠ ತಾಂತ್ರಿಕ ಸಮಿತಿಯ ನಿರ್ದೇಶಕರನ್ನಾಗಿ ಮಾನ್ಯ ಶ್ರೀ ಕೆ.ಜೈಪ್ರಕಾಶ್ ನೇಮಕವಾಗಿದ್ದು, ತಾಂತ್ರಿಕ ಸಮಿತಿಗೆ ಪರಿಣಿತರನ್ನು ಆಯ್ಕೆ ಮಾಡಿಕೊಂಡು ಕೇಂದ್ರ ಸರ್ಕಾರಕ್ಕೆ ಸಲ್ಲಿಸುವ ನೀರಾವರಿ ಪ್ರಸ್ತಾವನೆಯನ್ನು ಸಿದ್ಧಪಡಿಸಲು ಸೂಚಿಸಿದರು, ತಾಂತ್ರಿಕ ಸಮಿತಿಯ ಕಾರ್ಯದರ್ಶಿ ಮಾತನಾಡಿ ಈ ಬಗ್ಗೆ ಈಗಾಗಲೇ ನಾಲ್ಕು ತಾಂತ್ರಿಕ ಸಭೆಗಳನ್ನು ನಡೆಸಿದ್ದು, ಶೀಘ್ರವಾಗಿ ಪ್ರಸ್ತಾವನೆ ಸಲ್ಲಿಸುವುದಾಗಿ ತಿಳಿಸಿದರು.

**[ತಾಂತ್ರಿಕ ಸಮಿತಿಯ ನಿರ್ದೇಶಕರು, ನೀರಾವರಿ ತಜ್ಞ ಶ್ರೀ ಜಿ.ಎಸ್.ಪರಮಶಿವಯ್ಯ ಅಧ್ಯಯನ ಪೀಠ, ತುಮಕೂರು ವಿಶ್ವವದ್ಯಾನಿಲಯ, ಮುಖ್ಯ ಇಂಜಿನಿಯರ್, ಹೇಮಾವತಿ ನಾಲಾ ವಿಭಾಗ, ಎತ್ತಿನಹೊಳೆ ಯೋಜನೆ ಮತ್ತು ಭದ್ರಾ ಮೇಲ್ದಂಡೆ ಯೋಜನೆ ತುಮಕೂರು/ ಜಂಟಿ ಕೃಷಿ ನಿರ್ದೇಶಕರು, ತುಮಕೂರು; ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ, ತುಮಕೂರು, ಸಣ್ಣ ನೀರಾವರಿ ಇಇ ತುಮಕೂರು]**

3. ನರೇಗಾ:

ಉಪಕಾರ್ಯದರ್ಶಿ(ಅಭಿವೃದ್ಧಿ), ಜಿ.ಪಂ, ತುಮಕೂರುರವರು ಮಾತನಾಡಿ, ನರೇಗಾ ಯೋಜನೆಯಡಿ 44,000 ಕಾಮಗಾರಿಗಳು ಚಾಲನೆಯಲ್ಲಿರುತ್ತವೆ; ಹೆಚ್ಚುವರಿಯಾಗಿ ಅಂತರ್ಜಲ ಅಭಿವೃದ್ಧಿ ಯೋಜನೆಯಡಿ 6,147 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಜಲಾನಯನ ಜಲಾಮೃತ ಯೋಜನೆಯಡಿ ಪ್ರತಿ ತಾಲ್ಲೂಕಿಗೆ 2.5 ಹೆಕ್ಟೇರ್‌ನಂತೆ 22,50,000 ಮಾನವ ದಿನಗಳನ್ನು ಸೃಜಿಸುವ ಗುರಿ ಇದ್ದು, 3.96 ಲಕ್ಷ ಉದ್ಯೋಗ ಚೀಟಿಗಳನ್ನು ನೀಡಲಾಗಿರುತ್ತದೆ. ಪ್ರಸ್ತುತ 1.70 ಲಕ್ಷ ಉದ್ಯೋಗ ಚೀಟಿದಾರರು ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ಸಭೆಗೆ ಮಾಹಿತಿ ವಿವರಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಮಾನವ ದಿನಗಳ ಸೃಜನೆ ಮತ್ತು ಉದ್ಯೋಗ ಚೀಟಿದಾರರ ಅಂಕಿ-ಅಂಶಗಳಲ್ಲಿನ ವ್ಯತ್ಯಾಸದ ಕುರಿತು ಸ್ಪಷ್ಟೀಕರಣ ಪಡೆದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಸಾಮಗ್ರಿ ಹೆಚ್ಚಳ ಮಾಡಿ ಜಿಲ್ಲೆಯ ಪ್ರತಿ ಗ್ರಾಮದಲ್ಲೂ ಕಾಮಗಾರಿಗಳನ್ನು ಕೈಗೊಂಡು ಪಿಕಪ್‌ಗಳನ್ನು ಹೆಚ್ಚು ನಿರ್ವಹಿಸಬೇಕೆಂದು ತಿಳಿಸಿದರು. ಈ ಮಾತಿಗೆ ಮಾನ್ಯ ಜಿಲ್ಲಾಧಿಕಾರಿ ಯವರು ಸಹಮತ ವ್ಯಕ್ತಪಡಿಸಿ ಶೇ.40 ರಷ್ಟು ಸಾಮಗ್ರಿ ಕೇಂದ್ರಿತ ಕಾಮಗಾರಿಗಳನ್ನು ನಿರ್ವಹಿಸಬೇಕಿರುವುದರಿಂದ ಪ್ರಾರಂಭದಿಂದಲೇ ಈ ಬಗ್ಗೆ ಗಮನ ಹರಿಸುವಂತೆ ತಿಳಿಸಿದರು.

**ಹಸಿರು ಕರ್ನಾಟಕ:-** ಮಾನ್ಯ ಉಪಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡಿ, ನರೇಗಾ ಯೋಜನೆಯಡಿ ಪ್ರತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 1000 ಸಸಿಗಳನ್ನು ನೆಡುವುದಾಗಿ ಸಭೆಯ ಗಮನಕ್ಕೆ ತಂದರು. ಮಾನ್ಯ ಅಧ್ಯಕ್ಷರು ಮಾತನಾಡಿ ಜಿಲ್ಲೆಯ 330 ಗ್ರಾಮಪಂಚಾಯಿತಿಗಳು ಮತ್ತು 11 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲೂ 5 ವರ್ಷಗಳ ಗಿಡಗಳ ನಿರ್ವಹಣೆಗೆ ಜಾಬ್‌ಕಾರ್ಡ್ ಇರುವವರನ್ನು ವಾಚರ್‌ಗಳಾಗಿ ನೇಮಕ ಮಾಡಲು ಹಾಗೂ ಪ್ರತಿ ಗ್ರಾಮಪಂಚಾಯತ್ ವ್ಯಾಪ್ತಿಯಲ್ಲಿ ಕನಿಷ್ಠ 10000 ಗಿಡ ಹಾಕಲು ಯೋಜನೆ ರೂಪಿಸಲು ಸೂಚಿಸಿದರು. ಈ ಬಗ್ಗೆ ಮುಂದಿನ ಸಭೆಯಲ್ಲಿ ವರದಿ ಮಂಡಿಸುವುದಾಗಿ ಅಧಿಕಾರಿಗಳು ತಿಳಿಸಿದರು.

**[ಕ್ರಮ: ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯತ್, ತುಮಕೂರು]**

**4. ಪಿ.ಎಂ.ಜಿ.ಎಸ್.ವೈ:**

ಕಾರ್ಯಪಾಲಕ ಇಂಜಿನಿಯರ್‌ರವರು ಮಾತನಾಡಿ, ಕಾರ್ಯಕ್ರಮಗಳ ಪ್ರಗತಿ ಮಾಹಿತಿ ವಿವರಿಸುತ್ತಾ, ವಾರ್ಷಿಕ 283 ಕಿ.ಮೀ ರಸ್ತೆ ಅಭಿವೃದ್ಧಿ ಗುರಿ ಇರುವುದಾಗಿ ತಿಳಿಸಿದರು. ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಪಿ.ಎಂ.ಜಿ.ಎಸ್.ವೈ.ಗೆ ಸರ್ಕಾರ ಕಡಿಮೆ ಗುರಿ ನೀಡಿರುವುದಾಗಿ ಅಭಿಪ್ರಾಯ ವ್ಯಕ್ತಪಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ರಸ್ತೆ ಬದಿ ಗಿಡಗಳನ್ನು ನೆಡಲು ಅವಕಾಶವಿದ್ದು, ಸದರಿ ಗಿಡಗಳ ನಿರ್ವಹಣೆಗೆ ಯಾವ ರೀತಿ ಕ್ರಮ ವಹಿಸಲಾಗಿದೆ ಎಂದು ಕೇಳಿದಾಗ, ರಸ್ತೆ ಬದಿ ಗಿಡ ನೆಡಲು ಜಾಗ ಬಿಡಲಾಗುತ್ತದೆ ಅಲ್ಲಿ ಅರಣ್ಯ ಇಲಾಖೆಯವರು ಗಿಡ ನೆಡುತ್ತಾರೆ. ಈ ಸಂಬಂಧ ನಮ್ಮ ಗ್ರಾಮ-ನಮ್ಮ ರಸ್ತೆ ಮತ್ತು ಪಿ.ಎಂ.ಜಿ.ಎಸ್.ವೈ. ಯೋಜನೆಗಳಡಿ ಅರಣ್ಯ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಪಟ್ಟಿ ನೀಡಲಾಗಿದ್ದು, ಅದರಂತೆ ಅರಣ್ಯ ಇಲಾಖೆಯವರು ಗಿಡ ನೆಡಬೇಕಾಗುತ್ತದೆ ಎಂದು ಸಭೆಗೆ ಮಾಹಿತಿ ವಿವರಿಸಿದರು. ಪ್ರತಿಯಾಗಿ ಸಭೆಯ ಮಾನ್ಯ ಅಧ್ಯಕ್ಷರು ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ, ತಾಲ್ಲೂಕು ಮಟ್ಟದ ಅಧಿಕಾರಿಗಳಿಂದ ಮಾಹಿತಿ ಪಡೆದು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿ ಹಾಜರುಪಡಿಸಲು ತಿಳಿಸಿದರು.

**[ಕಾರ್ಯಪಾಲಕ ಅಭಿಯಂತರರು, ಪಿಎಂಜಿಎಸ್‌ವೈ, ತುಮಕೂರು/ ಶಿರಾ]**

**5.ಸ್ವಚ್ಛ ಭಾರತ್ ಮಿಷನ್:**

ಮಾನ್ಯ ಮುಖ್ಯ ಯೋಜನಾಧಿಕಾರಿಯವರು ಮಾತನಾಡಿ, ಕಾರ್ಯಕ್ರಮದ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಇಡೀ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗಿರುವ ವೈಯಕ್ತಿಕ/ ಗೃಹ ಶೌಚಾಲಯಗಳ ಮಾಹಿತಿ ಪಡೆದರು. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ, ಬಾಕಿ ಇರುವ ಪ್ರಕರಣಗಳ ಸಂಬಂಧ ಸಕಾರಣವಾಗಿ ಪೂರ್ಣ ಮಾಹಿತಿ ವಿವರಿಸಿದರು. ಮಾನ್ಯ ಸದಸ್ಯರು ಮುಂದುವರೆದು ಮಾತನಾಡಿ, ಸಮುದಾಯ ಶೌಚಾಲಯ ನಿರ್ವಹಣೆಯನ್ನು ಒಂದು ಜಿ.ಐ.ಎಸ್. ಪದರ ಮಾಡಬೇಕೆಂದು ತಿಳಿಸಿದರು. ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಓ.ಡಿ.ಎಫ್.ಗೆ ಬಾಕಿ ಉಳಿದಿರುವ ಗ್ರಾಮಗಳನ್ನು ಗುರುತಿಸಿ ಪರಿಹಾರ ನೀಡಬೇಕೆಂದು ತಿಳಿಸಿದರು.

[**ಕ್ರಮ: ಮುಖ್ಯ ಯೋಜನಾಧಿಕಾರಿಗಳು, ಜಿ.ಪಂ, ತುಮಕೂರು**]

**6. ತೋಟಗಾರಿಕಾ ಇಲಾಖೆ:**

ಉಪನಿರ್ದೇಶಕರು ಮಾತನಾಡಿ, ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮುಂದುವರೆದು, ತೋಟಗಾರಿಕೆ ಬೆಳೆಗಳಿಗೆ ಸಂಬಂಧಿಸಿದಂತೆ ಬೆಳೆ ವಿಮೆ ನೋಂದಣಿಯ ಅವಧಿ ವಿಸ್ತರಣೆಗೆ (Only for loany, not for Non-loany) ದಿ: 30.06.2020 ಕೊನೆಯ ದಿನಾಂಕವಾಗಿದ್ದು, ದಿನಾಂಕ ವಿಸ್ತರಣೆಗಾಗಿ ಈ ಸಭೆಯ ಮೂಲಕ ಇಲಾಖಾ ಮುಖ್ಯಸ್ಥರಿಗೆ ಮನವಿ ಮಾಡಬೇಕೆಂದು ಕೋರಿದರು. ಪ್ರತಿಯಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ವಿವರಗಳನ್ನು ನೀಡಿದಲ್ಲಿ ಸಂಬಂಧಪಟ್ಟವರೊಂದಿಗೆ ಸಮಾಲೋಚಿಸುವುದಾಗಿ ಸಭೆಗೆ ಭರವಸೆಯಿತ್ತರು. ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕರು ಮಾತನಾಡಿ, ಎಲ್ಲರಿಗೂ ದಿನಾಂಕ: 30–6–2020 ಕಡೇ ದಿನಾಂಕವೆಂದು ಸಭೆಗೆ ಮಾಹಿತಿ ಸ್ಪಷ್ಟ ಪಡಿಸಿದರು. ಪ್ರತಿಯಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಈ ಕುರಿತು ಪರಿಶೀಲಿಸಿ ಅಗತ್ಯ ಕ್ರಮವಹಿಸಬೇಕೆಂದು ಇಲಾಖಾಧಿಕಾರಿಯವರಿಗೆ ತಿಳಿಸಿದರು.

**ಕೋಲ್ಡ್ ಸ್ಟೋರೇಜ್ ಮತ್ತು ಗೋದಾಮು:-** ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಕೋಲ್ಡ್ ಸ್ಟೋರೇಜ್ ಮತ್ತು ಗೋದಾಮುಗಳ ಬಗ್ಗೆ ಪ್ರಸ್ತಾಪಿಸಿದರಲ್ಲದೆ, ನಬಾರ್ಡ್ ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಈ ಕುರಿತು ಗಂಭೀರವಾಗಿ ಪರಿಗಣಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಕೋಲ್ಡ್ ಸ್ಟೋರೇಜ್‌ಗಳನ್ನು ವ್ಯವಸ್ಥೆಗೊಳಿಸಿ, ರೈತರಿಗೆ ಅನುಕೂಲ ಕಲ್ಪಿಸಿಕೊಡಬೇಕೆಂದು ಇಲಾಖಾಧಿಕಾರಿಯವರಿಗೆ ತಿಳಿಸಿದರು. ಪ್ರತಿಯಾಗಿ ಇಲಾಖಾಧಿಕಾರಿಯವರು ಮಾತನಾಡಿ, ಪ್ರಸ್ತುತ ಶಿರಾ ತಾಲ್ಲೂಕಿನಿಂದ ಇಬ್ಬರು ರೈತರಿಂದ ಕೋಲ್ಡ್‌ಸ್ಟೋರೇಜ್‌ಗೆ ಬೇಡಿಕೆ ಬಂದಿದ್ದು ಈ ಕುರಿತು ಕ್ರಮವಹಿಸಲಾಗುವುದು; ಹಾಗೆಯೇ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಸಹಾಯಧನ ನೀಡಲಾಗುವುದು; ಇದೇ ರೀತಿ ಕಳೆದ ವರ್ಷ ತಿಪಟೂರು ತಾಲ್ಲೂಕಿಗೆ ರೂ. 1.36ಲಕ್ಷ ಸಹಾಯಧನ ನೀಡಲಾಗಿದೆ ಎಂದು ಸಭೆಗೆ ಮಾಹಿತಿ ವಿವರಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡಿ, ನಬಾರ್ಡ್ ಅಧಿಕಾರಿಗಳು ಸಭೆಗೆ ಹಾಜರಾಗಿಲ್ಲವೆಂದು ತೀವ್ರ ಆಕ್ಷೇಪ ವ್ಯಕ್ತಪಡಿಸಿದರಲ್ಲದೆ, ಕೋಲ್ಡ್ ಸ್ಟೋರೇಜ್ ಮತ್ತು ಗೋದಾಮುಗಳ ಬಳಕೆಯ ಬಗ್ಗೆ ಎ.ಪಿ.ಎಂ.ಸಿ/ ನಬಾರ್ಡ್/ ಕೃಷಿ/ ತೋಟಗಾರಿಕೆ ಇಲಾಖೆಗಳ ಅಧಿಕಾರಿಗಳು ಒಟ್ಟಿಗೆ ಪರಸ್ಪರ ಸಮಾಲೋಚಿಸಿ ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು. ತೋಟಗಾರಿಕಾ ಉಪನಿರ್ದೇಶಕರು ಸಭೆ ಆಯೋಜಿಸಿ ವರದಿ ನೀಡಲು ಸೂಚಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಪ್ಯಾಕ್‌ಹೌಸ್ ಮಂಜೂರಾತಿ ಬಗ್ಗೆ ತೋಟಗಾರಿಕೆ ಉಪನಿರ್ದೇಶಕರಿಂದ ಮಾಹಿತಿ ಪಡೆದರು. ನರೇಗಾ ಯೋಜನೆಯಡಿಯಲ್ಲಿ ಪ್ಯಾಕ್ ಹೌಸ್ ನಿರ್ಮಾಣ ಮಾಡಲು ಸಲಹೆ ನೀಡಿದರು.

**[ಕ್ರಮ: ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ, ತುಮಕೂರು]**

**7. ರೇಷ್ಮೆ ಇಲಾಖೆ:**

ಉಪನಿರ್ದೇಶಕರು ಮಾತನಾಡಿ, ಇಲಾಖಾ ಕಾರ್ಯಕ್ರಮಗಳ ಪ್ರಗತಿ ವರದಿಯನ್ನು ಸಭೆಗೆ ವಿವರಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ರೇಷ್ಮೆ ಕೃಷಿ ಫಾರಂ ಬಗ್ಗೆ ಮಾಹಿತಿ ಪಡೆದರು. ಮುಂದಿನ ಸಭೆ ವೇಳೆಗೆ ರೇಷ್ಮೆ ಕೃಷಿ ಫಾರಂ ಜಿ.ಐ.ಎಸ್ ಪದರ ಮಾಡುವ ಮೂಲಕ ಮಾಹಿತಿ ನೀಡಲು ಸಲಹೆ ನೀಡಿದರು.

**8. ಬೆಸ್ಕಾಂ:**

ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಯವರು ಮಾತನಾಡಿ, ಯೋಜನೆಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮಾನ್ಯ ವಿಧಾನಪರಿಷತ್ ಸದಸ್ಯರು ಮತ್ತು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರುಗಳು ಮಾತನಾಡಿ, ತಾಂಡ್ಯ ಮತ್ತು ಹ್ಯಾಮ್ಲೆಟ್‌ಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಿರುವ ಕುರಿತು ಮಾಹಿತಿ ಸ್ಪಷ್ಟಪಡಿಸಿಕೊಂಡರು. ಪೂರಕವಾಗಿ ಯೋಜನಾ ನಿರ್ದೇಶಕರು ಮಾತನಾಡಿ, ತಾಂಡ್ಯ ಮತ್ತು ಹ್ಯಾಮ್ಲೆಟ್‌ಗಳಲ್ಲಿ ನಿರ್ಮಿಸಲಾಗಿರುವ ಮನೆಗಳ ಪೈಕಿ ಮಂದಿ ವಾಸವಿರುವ ಮನೆಗಳಿಗೆ ವಿದ್ಯುತ್ ಪೂರೈಸಲಾಗಿರುತ್ತದೆ ಎಂದು ಸಭೆಗೆ ಮಾಹಿತಿ ಸ್ಪಷ್ಟಪಡಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್ ಮುಂದುವರೆದು ಮಾತನಾಡುತ್ತಾ, 2019ರ ಅಂತ್ಯದ ವೇಳೆಗೆ ದೇಶದ ಎಲ್ಲಾ ಮನೆಗಳಿಗೂ ಮತ್ತು ಗ್ರಾಮಗಳಿಗೂ ವಿದ್ಯುತ್ ಸರಬರಾಜು ಮಾಡಲು ಕೇಂದ್ರ ಸರ್ಕಾರ ಘೋಶಿಸಿರುವುದರಿಂದ ಎಲ್ಲಾ ಮನೆಗಳಿಗೆ ಮತ್ತು ಗ್ರಾಮ, ಕಾಲೋನಿ, ತಾಂಡಾಗಳಿಗೆ ಶೇ.100% ವಿದ್ಯುತ್ ಪೂರೈಸಲು ತುರ್ತು ಅಗತ್ಯ ಕ್ರಮವಹಿಸಬೇಕೆಂದು ಯೋಜನಾ ನಿರ್ದೇಶಕರಿಗೆ ತಿಳಿಸಿದರು. ಮಾನ್ಯ ಅಧ್ಯಕ್ಷರು ಮಾತನಾಡಿ ಮುಂದಿನ ಸಭೆ ವೇಳೆಗೆ ಕರಾರುವಕ್ಕಾದ ಮಾಹಿತಿಯೊಂದಿಗೆ ಬರಲು ಹಾಗೂ ಶೇ 100 ಸಾಧನೆ ಬಗ್ಗೆ ಘೋಶಿಸಲು ಅಗತ್ಯಕ್ರಮಕೈಗೊಳ್ಳಲು ಸೂಚಿಸಿದರು.

**[ಕ್ರಮ: ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ(ಗ್ರಾ) ವಿಭಾಗ, ತುಮಕೂರು]**

**9. ಸ್ಮಾರ್ಟ್‌ಸಿಟಿ:**

ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಯವರು ಮಾತನಾಡಿ ಯೋಜನೆಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರಲ್ಲದೆ ವಾರಕ್ಕೊಮ್ಮೆ ಸಭೆ ನಡೆಸಿ, ಅಗತ್ಯ ಕ್ರಮವಹಿಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

**10. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ:**

ಇಲಾಖಾ ಅಧಿಕಾರಿಯವರು ಮಾತನಾಡಿ, ಇಲಾಖಾ ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಆಯುಷ್ಮಾನ್ ಕಾರ್ಡ್ ವಿತರಣೆಯ ಕುರಿತು ಮಾಹಿತಿ ಪಡೆದರು. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ, ಮಾರ್ಚ್ ಮಾಹೆಯ 24ನೇ ದಿನಾಂಕದಿಂದ ಆಯುಷ್ಮಾನ್ ಕಾರ್ಡ್ ವಿತರಣೆಯ ಕಾರ್ಯ ಸ್ಥಗಿತಗೊಂಡಿದ್ದು, ಪುನ: ಈಗ ಕಾರ್ಯೋನ್ಮುಖರಾಗಿದ್ದಾರೆ ಎಂದು ಸಭೆಗೆ ತಿಳಿಸಿದರಲ್ಲದೆ ಈ ಕುರಿತು ಶೇ.100% ಪ್ರಗತಿ ಸಾಧಿಸಬೇಕೆಂದು ಡಿ.ಹೆಚ್.ಓ.ರವರಿಗೆ ತಿಳಿಸಿದರು.

ಮಾನ್ಯ ಸದಸ್ಯರು ಮುಂದುವರೆದು ಮಾತನಾಡಿ, ಡೆಂಗ್ಯೂ, ಚಿಕುನ್‌ಗುನ್ಯಾ ಮತ್ತು ಮಲೇರಿಯಾ ರೋಗಗಳ ಪತ್ತೆ ಹಚ್ಚುವಿಕೆಯ ಕುರಿತು ಪ್ರಸ್ತಾಪಿಸಿದರು. ಪ್ರತಿಯಾಗಿ ಡಿ.ಹೆಚ್.ಓ.ರವರು ಮಾತನಾಡಿ, ಪ್ರಸಕ್ತ ಮಾಹೆಯಲ್ಲಿ ಯಾವುದೇ ಪ್ರಕರಣಗಳು ಪತ್ತೆಯಾಗಿಲ್ಲವೆಂದೂ ಈವರೆಗೆ ಜಿಲ್ಲೆಯಲ್ಲಿ 16 ಡೆಂಗ್ಯೂ ಪ್ರಕರಣಗಳು, 52 ಚಿಕುನ್‌ಗುನ್ಯಾ ಪ್ರಕರಣಗಳು ಮತ್ತು ಒಂದು ಮಲೇರಿಯಾ ಪ್ರಕರಣ ವರದಿಯಾಗಿದ್ದುದಾಗಿ ಸಭೆಗೆ ಮಾಹಿತಿ ವಿವರಿಸುತ್ತಾ, ಕೋವಿಡ್-19 ಸೋಂಕಿನ ಪ್ರಯುಕ್ತ ಕೆಲವು ಯೋಜನೆಗಳ ಪ್ರಗತಿ ಕುಂಠಿತವಾಗಿದ್ದು, ಪ್ರಸ್ತುತ ಪ್ರಗತಿ ಸಾಧಿಸಲಾಗುವುದು ಎಂದು ಸಭೆಗೆ ತಿಳಿಸಿದರು. ಮುಂದುವರೆದು ಮಾನ್ಯ ಸದಸ್ಯರು ಮಾತನಾಡಿ, ಕ್ಯಾನ್ಸರ್ ಆಸ್ಪತ್ರೆಯ ಬಗ್ಗೆ ಪೂರಕ ಮಾಹಿತಿ ಪಡೆದರು

**ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜು:-** ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ತುಮಕೂರು ಜಿಲ್ಲೆಗೆ ಈ ಹಿಂದೆ ವೈದ್ಯಕೀಯ ಶಿಕ್ಷಣ ಕಾಲೇಜು ಮಂಜೂರಾಗಿದ್ದರ ಬಗ್ಗೆ ಮಾಹಿತಿ ಪಡೆದರು. ಪೂರಕವಾಗಿ ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಭಾರತ ಸರ್ಕಾರದ ನಿಯಮಗಳ ಪ್ರಕಾರ ಕೆಲವು ಹಿಂದುಳಿದ ಜಿಲ್ಲೆಗಳಲ್ಲಿ ರಾಜ್ಯ ಸರ್ಕಾರದ ವತಿಯಿಂದಲೇ ವೈದ್ಯಕೀಯ ಶಿಕ್ಷಣ ಕಾಲೇಜು ತೆರೆಯಲು ಅವಕಾಶವಿರುವುದಾಗಿ ಸಭೆಗೆ ಸ್ಪಷ್ಟಪಡಿಸಿದರು. ಪ್ರತಿಯಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಈ ಕುರಿತು ರಾಜ್ಯ ಸರ್ಕಾರಕ್ಕೆ ಅವಕಾಶವಿದೆ ಮುಂದಿನ ಸಭೆ ವೇಳೆಗೆ ಸ್ಪಷ್ಟ ಮಾಹಿತಿ ಸಂಗ್ರಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಈ ಮಾತಿಗೆ ಮಾನ್ಯ ವಿಧಾನಪರಿಷತ್ ಸದಸ್ಯರು ಸಹಮತ ವ್ಯಕ್ತಪಡಿಸಿದರು. ಡಿ.ಹೆಚ್.ಓ.ರವರು ಮಾತನಾಡಿ, ವೈದ್ಯಕೀಯ ಶಿಕ್ಷಣ ಕಾಲೇಜು ಮಂಜೂರಾತಿಗೆ ಈ ಸಭೆಯ ಮೂಲಕ ಸರ್ಕಾರಕ್ಕೆ ಸ್ವಲ್ಪ ಮಟ್ಟಿನ ಒತ್ತಡ ಹೇರಿದರೆ ತುಮಕೂರು ಜಿಲ್ಲೆಗೆ ಕಳೆದ ವರ್ಷ ಮಂಜೂರಾಗಿದ್ದ ವೈದ್ಯಕೀಯ ಶಿಕ್ಷಣ ಕಾಲೇಜಿಗೆ ಒತ್ತಾಸೆ ಸಿಗಬಹುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಈ ಮಾತಿಗೆ ಪೂರಕವಾಗಿ ಮಾನ್ಯ ವಿಧಾನಪರಿಷತ್ ಸದಸ್ಯರು ಮತ್ತು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಬೇಕೆಂದು ಡಿ.ಹೆಚ್.ಓ.ರವರಿಗೆ ತಿಳಿಸಿದರು.

**ಕ್ರಮ: [ಜಿಲ್ಲಾ ಆರೋಗ್ಯಾಧಿಕಾರಿಗಳು, ತುಮಕೂರು]**

**11. ಸಾರ್ವಜನಿಕ ಶಿಕ್ಷಣ ಇಲಾಖೆ:**

ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ತುಮಕೂರು ಇವರು ಮಾತನಾಡಿ, ಇಲಾಖಾ ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಶಿಕ್ಷಣ ಇಲಾಖೆಯಡಿ ಎಷ್ಟು ಶಾಲೆಗಳು ತೆರೆದಿವೆ ಮತ್ತು ಎಷ್ಟು ಶಾಲೆಗಳು ಮುಚ್ಚಿವೆ ಎಂಬುದರ ಕುರಿತು ಜಿ.ಐ.ಎಸ್.ನಲ್ಲಿ ಮಾಹಿತಿಯನ್ನು ಆರೋಹಿಸಬೇಕೆಂದು ಕೆ-ಸ್ವಾಕ್ ಅಧಿಕಾರಿಯವರಿಗೆ ತಿಳಿಸಿದರು. ಪೂರಕವಾಗಿ ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಮೇಲ್ಕೈ ಪೂರಕ ಪದರಗಳನ್ನು ಮಾಡಬೇಕೆಂದು ತಿಳಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಮುಂದಿನ ದಿನಗಳಲ್ಲಿ ಸರ್ಕಾರಿ ಶಾಲೆಗಳಿಗೆ ಬೇಡಿಕೆ ಹೆಚ್ಚಾಗುತ್ತದೆ, ಪ್ರಸ್ತುತ ನಿರುದ್ಯೋಗ ಸಮಸ್ಯೆ ಹೆಚ್ಚಾಗಿದೆ, ಪರಿಸ್ಥಿತಿ ಇದೇ ರೀತಿ ಮುಂದುವರೆದರೆ ಮುಂದಿನ 4-5 ವರ್ಷಗಳಲ್ಲಿ ಬಹಳ ಕಷ್ಟವಾಗುತ್ತದೆ ಎಂದು ಸಭೆಗೆ ತಿಳಿಸುತ್ತಾ, ಎಸ್.ಎಸ್.ಎ. ಯೋಜನೆಯಡಿ ಶಾಲಾ ಕಟ್ಟಡಗಳಿಗೆ ಹೆಚ್ಚಿನ ಒತ್ತು ನೀಡಬೇಕೆಂದು ತಿಳಿಸಿದರು. ಈ ಮಾತಿಗೆ ಮಾನ್ಯ ಜಿಲ್ಲಾಧಿಕಾರಿಯವರು ಸಹಮತ ವ್ಯಕ್ತಪಡಿಸಿದರು. ಮುಂದುವರೆದು ಮಾತನಾಡುತ್ತಾ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಪ್ರವೇಶಾತಿ ಕಡಿಮೆಯಾದರೆ ಶಿಕ್ಷಕರುಗಳೇ ಜವಾಬ್ದಾರರಾಗುತ್ತಾರೆ ಎಂದು ಎಚ್ಚರಿಸಿದರು. ಪ್ರತಿಯಾಗಿ ಮಧುಗಿರಿ ಶೈಕ್ಷಣಿಕ ಜಿಲ್ಲೆಯ ಉಪನಿರ್ದೇಶಕರು ಮಾತನಾಡಿ, ಪ್ರಸ್ತುತ ಆಂಗ್ಲ ಮಾಧ್ಯಮದ

ಒಂದನೇ ತರಗತಿ ಪ್ರವೇಶಾತಿಗೆ ಅತ್ಯಂತ ಬೇಡಿಕೆಯಿದ್ದು, ಈಗಾಗಲೇ 70-80 ಅರ್ಜಿಗಳು ಬಂದಿವೆ. ಕಳೆದ ಸಾಲಿನಲ್ಲಿ 24 ಶಾಲೆಗಳಲ್ಲಿ ಶಿಕ್ಷಣಾರ್ಥಿಗಳ ಸಂಖ್ಯೆ ಪೂರ್ಣ ಪ್ರಮಾಣದಲ್ಲಿ ಭರ್ತಿಯಾಗಿದ್ದು, ಪ್ರಸಕ್ತ ವರ್ಷ 28 ಹೆಚ್ಚುವರಿ ಶಾಲೆಗಳು ಮಂಜೂರಾಗಿವೆ ಎಂದು ಸಭೆಗೆ ಮಾಹಿತಿ ವಿವರಿಸಿದರು.
[**ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ತುಮಕೂರು(ದ) & ಮಧುಗಿರಿ**]

**12. ಅಕ್ಷರ ದಾಸೋಹ:**

ಶಿಕ್ಷಣಾಧಿಕಾರಿಯವರು ಮಾತನಾಡಿ, ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರಲ್ಲದೆ, ಪ್ರಸಕ್ತ ಸಾಲಿಗೆ ಹಾಲಿನ ಪುಡಿ ಮತ್ತು ತಾಳೆ ಎಣ್ಣೆ ಸರಬರಾಜಿಗೆ ಸಂಬಂಧಿಸಿದಂತೆ ಮಂಡ್ಯ ಮತ್ತು ಶಿವಮೊಗ್ಗ ಜಿಲ್ಲೆಯವರೊಂದಿಗೆ ದರಸಂಧಾನ ಮಾಡಿ ಅನುಕೂಲ ಮಾಡಿಕೊಡಬೇಕೆಂದು ಕೋರಿದರು. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ, ವಿದ್ಯಾರ್ಥಿಗಳಿಗೆ ಮನೆ ಮನೆಗೆ ಪಡಿತರ ಪದಾರ್ಥಗಳನ್ನು ಕಳುಹಿಸಿಕೊಡುತ್ತಿರುವ ಕುರಿತು ಮಾಹಿತಿ ಸ್ಪಷ್ಟಪಡಿಸಿಕೊಂಡರು.

[**ಕ್ರಮ: ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ, ತುಮಕೂರು(ದ)/ ಮಧುಗಿರಿ**]

**13. ಆಹಾರ ಇಲಾಖೆ:**

ಉಪನಿರ್ದೇಶಕರು ಮಾತನಾಡಿ, ಇಲಾಖಾ ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿ ಶೇ.100% ಪ್ರಗತಿ ಸಾಧಿಸಬೇಕೆಂದು ಉಪನಿರ್ದೇಶಕರಿಗೆ ತಿಳಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಪಡಿತರ ಚೀಟಿ ವಿತರಣೆಯ ಕುರಿತು ಅಗತ್ಯ ಮಾಹಿತಿ ಪಡೆದರು. ಮಾನ್ಯ ಅಧ್ಯಕ್ಷರು ಮಾತನಾಡಿ ಮುಂದಿನ ಸಭೆಯಲ್ಲಿ ಪ್ರತಿಗ್ರಾಮಗಳ ಪಡಿತರ ಚೀಟಿಗಳ ಮಾಹಿತಿ ನೀಡಲು ಅಧಿಕಾರಿಗಳಿಗೆ ಸೂಚಿಸಿದರು. ಶೇ.100% ಪ್ರಗತಿ ಸಾಧಿಸಲು ಅಗತ್ಯವಿರುವ ಕಾಲಮಿತಿ ಯೋಜನೆಯೊಂದಿಗೆ ಸಭೆಗೆ ಹಾಜರಾಗಲು ಸೂಚಿಸಿದರು.
[**ಕ್ರಮ: ಉಪ ನಿರ್ದೇಶಕರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ತುಮಕೂರು**]

**14. ರೈಲ್ವೆ ಇಲಾಖೆ:**

ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ತುಮಕೂರು-ರಾಯದುರ್ಗ/ ತುಮಕೂರು-ದಾವಣಗೆರೆ (ಹೊಸ ರೈಲ್ವೆ ಮಾರ್ಗ) ಮತ್ತು ತುಮಕೂರು-ಅರಸೀಕೆರೆ (ದ್ವಿಪಥ ರೈಲ್ವೆ ಮಾರ್ಗ) ನಿರ್ಮಾಣಕ್ಕೆ ಸಂಬಂಧ ತುಮಕೂರು ಜಿಲ್ಲೆಯಲ್ಲಿ ಕಾಮಗಾರಿ ಅತ್ಯಂತ ವಿಳಂಬವಾಗಿರುವುದಕ್ಕೆ ಕಾರಣದ ಕುರಿತು ಭೂಸ್ವಾಧೀನಾಧಿಕಾರಿಯವರಿಂದ ಸ್ಪಷ್ಟ ಮಾಹಿತಿ ಪಡೆದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಟ್ರಕ್ ಟರ್ಮಿನಲ್ ಬಗ್ಗೆ ಪ್ರಸ್ತಾಪಿಸಲಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಅದು ಟ್ರಕ್ ಟರ್ಮಿನಲ್ಲ ಅಲ್ಲ; ಏಳು ಪಥಗಳ ರೈಲ್ವೆ ಮಾರ್ಗ ಎಂದು ಮಾಹಿತಿ ಸ್ಪಷ್ಟಪಡಿಸಿದರು. ಮುಂದುವರೆದು ಮಾತನಾಡುತ್ತಾ, ವಸಂತನರಸಾಪುರ ಕೈಗಾರಿಕಾ ವಸಾಹತಿನ ಅಂಚಿಗೆ 3 ಪಥಗಳ ರೈಲು ನಿಲ್ದಾಣ ನಿರ್ಮಾಣವಾಗಲಿದೆ. ಈ ಕುರಿತು ಭೂಸ್ವಾಧೀನ ಪ್ರಕ್ರಿಯೆ ಈಗ ಪ್ರಾರಂಭವಾಗಿದೆ. ಕೈಗಾರಿಕಾ ಪ್ರದೇಶದಿಂದ ವಸ್ತುಗಳನ್ನು (ಉತ್ಪನ್ನ/ಗೂಡ್ಸ್) ನೇರವಾಗಿ ಸಾಗಾಣಿಕೆ ಮಾಡಲು ಇದೊಂದು ಅತ್ಯಾವಶ್ಯಕ/ಉಪಯುಕ್ತ ಯೋಜನೆಯಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಭೂಸ್ವಾಧೀನಾಧಿಕಾರಿಯವರು ಮಾತನಾಡಿ, ತುಮಕೂರು ತಾಲ್ಲೂಕಿಗೆ ಸಂಬಂಧಿಸಿದಂತೆ, ಈಗಾಗಲೇ ಭೂಮಿ ಹಸ್ತಾಂತರವಾಗಲಿದೆ. ಶಿರಾ ತಾಲ್ಲೂಕಿಗೆ ಸಂಬಂಧಿಸಿದಂತೆ ಮುಂದಿನ 7–8 ತಿಂಗಳುಗಳಲ್ಲಿ ಹಸ್ತಾಂತರಿಸಲಾಗುವುದು; ತುಮಕೂರು–ದಾವಣಗೆರೆ ರೈಲ್ವೆ ಮಾರ್ಗ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲಿಸಲಾಗಿದ್ದು, ತ್ವರಿತವಾಗಿ ಕಾಮಗಾರಿ ನಿರ್ವಹಿಸಲಾಗುವುದು ಎಂದು ಸಭೆಗೆ ಮಾಹಿತಿ ಸ್ಪಷ್ಟಪಡಿಸಿದರು. ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ರೈಲ್ವೆ ಮಾರ್ಗ ನಕ್ಷೆಯನ್ನು ಒದಗಿಸುವಂತೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ತುಮಕೂರು– ಅರಸೀಕೆರೆ ದ್ವಿಪಥ ರೈಲ್ವೆ ಮಾರ್ಗ, ಜಿಲ್ಲೆಯಲ್ಲಿ ಇರ್ಮಾಣ ಮಾಡಲು ಉದ್ದೇಶಿಸಿರುವ ರೈಲ್ವೆ ಮೇಲು ಸೇತುವೆ/ಕೆಳಸೇತುವೆಗಳ ಕುರಿತು ಮಾಹಿತಿ ಪಡೆದರಲ್ಲದೆ ಸಂಬಂಧಪಟ್ಟ ಏಜೆನ್ಸಿಯವರನ್ನು ಮುಂದಿನ ಸಭೆಗೆ ಕಡ್ಡಾಯವಾಗಿ ಕರೆಸಬೇಕೆಂದು ರೈಲ್ವೆ ಅಧಿಕಾರಿಯವರಿಗೆ ತಿಳಿಸಿದರು.

**[ಕ್ರಮ: ವಿಶೇಷ ಭೂಸ್ವಾಧೀನಾಧಿಕಾರಿಗಳು, ತುಮಕೂರು–ದಾವಣಗೆರೆ ರೈಲ್ವೆ ಯೋಜನೆ/ ಜಿಲ್ಲಾಧಿಕಾರಿಗಳು] ತುಮಕೂರು]**

**15. ಎನ್.ಹೆಚ್.ಎ.ಐ.:**

ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ರಿಂಗ್ ರಸ್ತೆ ಬಗ್ಗೆ ಪ್ರಸ್ತಾಪಿಸಿದರು. ಪ್ರತಿಯಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಸಂಬಂಧಪಟ್ಟ ಅಧಿಕಾರಿಗಳನ್ನು ಕರೆಸಿ, ಸಭೆ ನಡೆಸಿ, 58 ಕಿ.ಮೀ. ಉದ್ದದ ಹೊರ ರಿಂಗ್ ರಸ್ತೆಗೆ ಕ್ರಮವಹಿಸಲಾಗುವುದು; ಎನ್.ಹೆಚ್–4ನಲ್ಲಿ ಎರಡು ಕಡೆ ಸಮಸ್ಯೆ ಇರುವುದರಿಂದ ಅದನ್ನು ಇತ್ಯರ್ಥ ಪಡಿಸಿ ನಂತರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಸಭೆಗೆ ಮಾಹಿತಿ ವಿವರಿಸಿದರು. ಈ ಮಾತಿಗೆ ಪೂರಕವಾಗಿ ಮಾನ್ಯ ವಿಧಾನಪರಿಷತ್ ಸದಸ್ಯರು ಮತ್ತು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಆಧ್ಯತೆ ಮೇಲೆ ಕ್ರಮವಹಿಸಬೇಕೆಂದು ಮಾನ್ಯ ಜಿಲ್ಲಾಧಿಕಾರಿಯವರಿಗೆ ತಿಳಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ತುಮಕೂರು–ಶಿವಮೊಗ್ಗ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವಿಳಂಬವಾಗಿದ್ದು, ಪ್ರಚಾರ ವ್ಯಾಪಕವಾಗಿಲ್ಲವೆಂದು ಅಸಮಾಧಾನ ವ್ಯಕ್ತಪಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, 0–12 ಕಿ.ಮೀ.(ಮಲ್ಲಸಂದ್ರ) ಕಾಮಗಾರಿ ಅಭಿವೃದ್ಧಿ ಪಡಿಸಬೇಕೆಂದು ತಿಳಿಸಿದರು. ಈ ಸಂಬಂಧ ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಸರ್ಕಾರಕ್ಕೆ ಅಗತ್ಯ ಪ್ರಸ್ತಾವನೆ ಕಳುಹಿಸಿಕೊಡಬೇಕೆಂದು ತಿಳಿಸಿದರು. ಮುಂದುವರೆದು ಮಾತನಾಡುತ್ತಾ, ತುಮಕೂರು ಅಕ್ಕ–ತಂಗಿ ಕೆರೆ ಬಳಿ ಮತ್ತು ಹಿರೇಹಳ್ಳಿ ಟೋಲ್‌ಗೇಟ್ ಬಳಿ ಸರ್ವೀಸ್ ರಸ್ತೆ ಇಲ್ಲದಿರುವ ಕುರಿತು ಪ್ರಸ್ತಾಪಿಸಿದರು. ಅಧಿಕಾರಿಯವರು ಮಾತನಾಡಿ, ಕ್ಯಾತ್ಸಂದ್ರದ 6 ಪಥದ ಯೋಜನೆಯ ಕುರಿತು ಸಭೆಗೆ ಮಾಹಿತಿ ವಿವರಿಸಿದರು. ಪ್ರತಿಯಾಗಿ ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಈ ಕುರಿತು ಮುಂದಿನ ಸಭೆಯಲ್ಲಿ ಪಿ.ಪಿ.ಟಿ. ಪ್ರದರ್ಶಿಸಬೇಕೆಂದು ಕೋರಿದರು. ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗಿರುವುದರಿಂದ ಕಾಮಗಾರಿ ವಿಳಂಬವಾಗಿರುವುದಾಗಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಎನ್.ಹೆಚ್–206ರ ಬಗ್ಗೆ ಕೆಳ ಸೇತುವೆ ಮತ್ತು ಮೇಲುಸೇತುವೆಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಿ ಸಮಸ್ಯೆಯನ್ನು ಇತ್ಯರ್ಥಪಡಿಸಬೇಕೆಂದು ಸಭೆಯ ಗಮನಕ್ಕೆ ತಂದರು.

ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ತಿಪಟೂರು ತಾಲ್ಲೂಕಿನ ಬಳಿ ಮಾದಿಹಳ್ಳಿ ಗ್ರಾಮದಲ್ಲಿ ರಸ್ತೆ ಅಗಲೀಕರಣಕ್ಕೆ ದಾರಿ ಬಿಡುತ್ತಿಲ್ಲವೆಂದು ದೂರು ಬಂದಿರುವುದಾಗಿ ಸಭೆಯ ಗಮನಕ್ಕೆ ತಂದರು.

**[ಕ್ರಮ: ಯೋಜನಾ ನಿರ್ದೇಶಕರು, NHAI, ತುಮಕೂರು/ ಚಿತ್ರದುರ್ಗ]**

29.12.2017

**16. ಜಿಲ್ಲಾ ಕೈಗಾರಿಕಾ ವಿಭಾಗ:**

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಕಳೆದ ಸಭೆಯ ಸೂಚನೆಯನ್ವಯ ಜಿಲ್ಲಾ ಕೈಗಾರಿಕಾ ವಿಭಾಗದ ಜಂಟಿ ನಿರ್ದೇಶಕರು ಇಂದಿನ ಸಭೆಗೆ ಪರಿಪೂರ್ಣ ಮಾಹಿತಿ ಒದಗಿಸಿಲ್ಲವೆಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಹಿಂದಿನ ಸಭೆಯಲ್ಲಿ ಈ ಬಗ್ಗೆ ಸೂಚಿಸಿದ್ದರು ಏಕೆ ಹೀಗೆ ಎಂದು ಲೀಡ್ ಬ್ಯಾಂಕ್ ಅಧಿಕಾರಿಗಳಿಗೆ ಪ್ರಶ್ನಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡಿ ಮೇಡ್ ಇನ್ ಇಂಡಿಯಾ, ಮೇಕ್ ಇನ್ ಇಂಡಿಯಾ, ಮುದ್ರಾ ಹೀಗೆ ಕೇಂದ್ರ ಸರ್ಕಾರದ ಎಲ್ಲಾ ಯೋಜನೆಯಡಿ ಜಿಲ್ಲೆಯ ಪ್ರತಿ ಬ್ಯಾಂಕುಗಳವಾರು ಬಂದಿರುವ ಅರ್ಜಿಗಳು ಮತ್ತು ಎಷ್ಟು ಮಂದಿ ಫಲಾನುಭವಿಗಳಿಗೆ ಸೌಲಭ್ಯ ಕಲ್ಪಿಸಲಾಗಿದೆ ಎಂದು ಪ್ರಶ್ನಿಸಿದರು. ಪ್ರತಿಯಾಗಿ ಜಂಟಿ ನಿರ್ದೇಶಕರು ಮಾತನಾಡಿ, ಲೀಡ್ ಬ್ಯಾಂಕ್ ಅಧಿಕಾರಿಗಳಿಂದ ತತ್ಸಂಬಂಧ ಮಾಹಿತಿ ಪಡೆದು ಮುಂದಿನ ಸಭೆಗೆ ಪರಿಪೂರ್ಣ ಮಾಹಿತಿ ಒದಗಿಸುವುದಾಗಿ ಸಭೆಗೆ ಭರವಸೆಯಿತ್ತರು.

**ಇನ್ವೆಸ್ಟ್ ತುಮಕೂರು:–** ಮಾನ್ಯ ಅಧ್ಯಕ್ಷರು ಮಾತನಾಡಿ ಇನ್ವೆಸ್ಟ್ ತುಮಕೂರು ಬಗ್ಗೆ ನಿಮ್ಮ ಕನಸಿನ ಚಿಂತನೆಯನ್ನು ತಿಳಿಸಲು ಅಧಿಕಾರಿಗಳಿಗೆ ಸೂಚಿಸಿದಾಗ, ಜಿಲ್ಲಾ ಕೈಗಾರಿಕಾ ವಿಭಾಗದ ಜಂಟಿ ನಿರ್ದೇಶಕರು ಮಾತನಾಡುತ್ತಾ, ಇದೊಂದು ಅತ್ಯುತ್ತಮ ಯೋಜನೆಯಾಗಿದ್ದು, ಇನ್ವೆಸ್ಟ್ ತುಮಕೂರು ಕಾರ್ಯಕ್ರಮದಡಿ ಸಂಬಂಧಿಸಿದ ಎಲ್ಲಾ ಇಲಾಖೆಗಳು ಜಿಲ್ಲೆಯ ಯಾವ ಭಾಗದಲ್ಲಿ ಯಾವ ಯೋಜನೆಗಳನ್ನು ಕೈಗೊಳ್ಳಬಹುದು ಎಂಬ ಮಾಹಿತಿಯನ್ನು ಸಂಗ್ರಹ ಮಾಡುವುದಾಗಿ ತಿಳಿಸಿದರು.

ಮಾನ್ಯ ಕುಂದರನಹಳ್ಳಿ ರಮೇಶ್ ಮಾತನಾಡಿ ತುಮಕೂರು ಸ್ಮಾಟ್ ಸಿಟಿ ನಿರುದ್ಯೋಗಿಗಳಿಗೆ ಉದ್ಯೋಗ ಸೃಷ್ಠಿಸಲು ಆದ್ಯತೆ ನೀಡಬೇಕು, ತುಮಕೂರು ನಗರದ ನಿರುದ್ಯೋಗಿಗಳು ಜಿಲ್ಲೆಯ ಯಾವುದೇ ಬಾಗದಲ್ಲಿ ಉದ್ದಿಮೆ ಆರಂಭಿಸಬಹುದು ಹಾಗೂ ಜಿಲ್ಲೆಯ ಯಾವುದೇ ಭಾಗದವರು ತುಮಕೂರು ನಗರದಲ್ಲಿ ಉದ್ದಿಮೆ ಆರಂಭಿಸಬಹುದು, ಈ ಹಿನ್ನೆಲೆಯಲ್ಲಿ ತುಮಕೂರು ಸ್ಮಾರ್ಟ್ ಸಿಟಿ ಸಹಭಾಗಿತ್ವದಲ್ಲಿ ಜಿಐಎಸ್ ಆಧಾರಿತ ವರದಿ ತಯಾರಿಸಲು ಸೂಚಿಸಿದರು.

ಕೇಂದ್ರ ಸರ್ಕಾರ ಮತ್ತು ರಾಜ್ಯಸರ್ಕಾರದ ಮುಂಗಡ ಪತ್ರಗಳ ಯೋಜನೆಗಳು, ಇಲಾಖಾವಾರು ವಿವಿಧ ಯೋಜನೆಗಳು, ಯೋಜನೆಗೆ ಅಗತ್ಯವಾಗಿರುವ ಮೂಲಭೂತ ಸೌಕರ್ಯಗಳು, ಸ್ಕಿಲ್, ನಿರುದ್ಯೋಗಿಗಳ ಮಾಹಿತಿ, ಎಂ.ಎಸ್.ಎಂ.ಇ ಮತ್ತು ವಿವಿಧ ಇಲಾಖೆಗಳ ಕಾರ್ಪೋರೇಷನ್, ಮಂಡಳಿ, ನಿಗಮಗಳ ಯೋಜನೆಗಳು ಸೇರಿದಂತೆ ಅತ್ಯುತ್ತಮ ಮಾಹಿತಿ ಪಡೆಯಲು ಮಾನ್ಯ ಅಧ್ಯಕ್ಷರು ಅಧಿಕಾರಿಗಳಿಗೆ ಸೂಚಿಸಿದರು. ಇಲಾಖಾವಾರು, ಯೋಜನೆವಾರು, ಇಲಾಖಾ ನೋಡೆಲ್ ಅಧಿಕಾರಿಗಳ ನೇಮಕ ಮಾಡುವ ಮಾಹಿತಿಯನ್ನು ಸಂಗ್ರಹಿಸಲು ಸೂಚಿಸಿದರು. ವರದಿ ತಯಾರಿಸಲು ಅಗತ್ಯವಿರುವ ಅನುದಾನವನ್ನು ತುಮಕೂರು ಸ್ಮಾರ್ಟ್ ಸಿಟಿ ಭರಿಸಲು ಸೂಚಿಸಿದರು. ಮಾನ್ಯ ಜಿಲ್ಲಾಧಿಕಾರಿಯವರು ಸಹಮತ ವ್ಯಕ್ತಪಡಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಕೇಂದ್ರ ಸರ್ಕಾರ ಕರ್ನಾಟಕ ಯೋಜನೆಗೆ ಒಟ್ಟಾರೆ ರೂ.17,000/–ಕೋಟಿ ಅನುದಾನ ಒದಗಿಸಲಾಗಿದ್ದು, ಸದರಿ ಯೋಜನೆಯಡಿ(ಎಂ.ಎಸ್.ಎಂ.ಇ) ತುಮಕೂರು ಜಿಲ್ಲೆಯಲ್ಲಿ ಎಲ್ಲೆಲ್ಲಿ ಏನೇನೂ ಮಾಡಬಹುದು ಯಾವ ಉದ್ಯಮ ಪ್ರಾರಂಭಿಸಲು ಅವಕಾಶಗಳಿವೆ, ಏನನ್ನು ಉತ್ಪಾದಿಸಲಾಗುತ್ತಿದೆ? ಏನೇನು ಸೌಲಭ್ಯ ಪಡೆಯಬಹುದು ಎಂಬ ಕುರಿತು ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿಪೂರ್ಣ ಮಾಹಿತಿ ಒದಗಿಸಬೇಕೆಂದು ಕೋರಿದರು. ಈ ಮಾತಿಗೆ ಮಾನ್ಯ ಜಿಲ್ಲಾಧಿಕಾರಿಯವರು ಸಹಮತ ವ್ಯಕ್ತಪಡಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಯಾದ ಕಾಯರ್ ಕ್ಲಸ್ಟರ್ ಯೋಜನೆಯ ಕುರಿತು ಮುಂದಿನ ಸಭೆಗೆ ಪರಿಪೂರ್ಣ ಮಾಹಿತಿ ಒದಗಿಸಬೇಕೆಂದು ಇಲಾಖಾಧಿಕಾರಿಯವರಿಗೆ ಸಲಹೆ ನೀಡಿದರು.

**[ಕ್ರಮ: ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ವಿಭಾಗ, ತುಮಕೂರು]**

**17. ಸಾಮಾಜಿಕ ಅರಣ್ಯ ವಿಭಾಗ:**

ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಮಾತನಾಡಿ, ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ಲಾಂಟೇಷನ್(ಸಸಿಗಳನ್ನು ನೆಡುವ) ಕುರಿತು ಮಾಹಿತಿ ಪಡೆದರು.

**18. ಪ್ರಾದೇಶಿಕ ಅರಣ್ಯ:**

ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಮಾತನಾಡಿ, ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ತುಮಕೂರು ನಗರ ವೃಕ್ಷ ಪ್ರಾಧಿಕಾರದ ಕುರಿತು ಅಗತ್ಯ ಮಾಹಿತಿ ಪಡೆದರು ಹಾಗೂ, ಈ ಕುರಿತು ಹಿಂಬಾಲಿಸಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮಾನ್ಯ ಜಿಲ್ಲಾಧಿಕಾರಿಯವರಿಗೆ ತಿಳಿಸಿದರಲ್ಲದೆ, ಪ್ರಸ್ತಾವನೆ ಬಾಕಿಯಿರುವ ಕುರಿತು ಮಾಹಿತಿ ನೀಡಿದರೆ ಸಂಬಂಧಪಟ್ಟ ಸಚಿವರನ್ನು ಸಂಪರ್ಕಿಸಿ ಬಗೆಹರಿಸಬಹುದೆಂದು ಅಭಿಪ್ರಾಯ ವ್ಯಕ್ತಪಡಿಸಿದರು ಮತ್ತು ಕಾರ್ಯಕ್ರಮದ ಕುರಿತು ಪೂರ್ಣ ಮಾಹಿತಿಯನ್ನು ತುಮಕೂರು ಜಿ.ಐ.ಎಸ್.ಗೆ ನೀಡಬೇಕೆಂದು ತಿಳಿಸಿದರು.

ತುಮಕೂರು ಜಿಲ್ಲೆಯ 330 ಗ್ರಾಮಪಂಚಾಯಿತಿಗಳ ಮತ್ತು 11 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿ ವೃಕ್ಷ ಪ್ರಾಧಿಕಾರ ರಚಿಸಿ ಕನಿಷ್ಠ ಸ್ಥಳೀಯ ಸಂಸ್ಥೆವಾರು 10000 ಗಿಡ ಹಾಕಲು ಮತ್ತು ನರೇಗಾ ಯೋಜನೆಯಡಿ 5 ವರ್ಷಗಳ ನಿರ್ವಹಣೆಗೆ ವಾಚರ್ ನೇಮಕದ ಮಾಹಿತಿಗಳೊಂದಿಗೆ ವರದಿ ನೀಡಲು ಅಧಿಕಾರಿಗಳಿಗೆ ಸೂಚಿಸಿದರು. ಇದೊಂದು ವಿಶೇಷ ಪ್ರಕರಣವಾಗಿದ್ದು ಅಗತ್ಯವಿದ್ದಲ್ಲಿ ರಾಜ್ಯ ಅಥವಾ ಕೇಂದ್ರ ಸರ್ಕಾರದ ಅನುಮತಿ ಪಡೆಯಲು ಸಲಹೆ ನೀಡಿದರು. ಹಸಿರು ಕರ್ನಾಟಕ ಯೋಜನೆಯಡಿ ಜಿಯೋಟ್ಯಾಗಿಂಗ್ ಮಾಡಲು ಸೂಚಿಸಿದರು.

ಜಿಲ್ಲೆಯ ಸಿದ್ಧರಬೆಟ್ಟ, ತಿಮ್ಮಲಾಪುರ, ದೇವರಾಯನ ದುರ್ಗ, ಜಿಂಕೆವನ ಮತ್ತು ಗುಬ್ಬಿ ತಾಲ್ಲೂಕು ಹೆಚ್.ಎ.ಎಲ್ ಗೆ ಹೊಂದಿಕೊಂಡಿರುವ ಅರಣ್ಯ ಪ್ರದೇಶಗಳ ಅಭಿವೃದ್ಧಿಗೆ ಮಾಸ್ಟರ್ ಪ್ಲಾನ್ ಸಿದ್ಧಪಡಿಸಲು ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

**[ಕ್ರಮ: ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಪ್ರಾದೇಶಿಕ ಅರಣ್ಯ ವಿಭಾಗ, ತುಮಕೂರು]**

**19. ಕೆ.ಐ.ಎ.ಡಿ.ಬಿ:**

ಸಭೆಯಲ್ಲಿ ಉಪಸ್ಥಿತರಿದ್ದ ಕೆ.ಐ.ಎ.ಡಿ.ಬಿ. ಅಭಿವೃದ್ಧಿ ಅಧಿಕಾರಿಯವರು ಮಾತನಾಡಿ, ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಕಾರ್ಯಕ್ರಮಗಳಡಿ ಅತ್ಯಲ್ಪ ಪ್ರಗತಿ ಸಾಧಿಸಿರುವ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಇಲಾಖಾ ಅಧಿಕಾರಿಯವರು ಮುಂದುವರೆದು ಮಾತನಾಡುತ್ತಾ, 17 ವಿವಿಧ ಕಂಪನಿಗಳನ್ನು ತೆರೆಯಲು ಒಟ್ಟಾರೆ 80 ಎಕರೆ ಜಾಗ ದೊರೆತಿರುವುದಾಗಿ ಮಾಹಿತಿ ಸ್ಪಷ್ಟಪಡಿಸಿದರಲ್ಲದೆ ಜೆ.ಎಂ.ಸಿ. ಆಕ್ಟ್ ಅನ್ವಯ 5 ಮತ್ತು 6ನೇ ಹಂತದ ಕಾಮಗಾರಿಗಳಿಗೆ ಭೂಸ್ವಾಧೀನ ಪ್ರಕ್ರಿಯೆಯ ಕುರಿತು ಸಭೆಗೆ ಮಾಹಿತಿ ವಿವರಿಸಿದರು.

ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಉದ್ಯೋಗ ಸೃಷ್ಟಿಯ ಕುರಿತು ಪ್ರಸ್ತಾಪಿಸಿದರು. ಅಧಿಕಾರಿಯವರು ಮಾತನಾಡಿ, ಹಂತ–5ರಡಿ 3175 ಎಕರೆ ವಿಸ್ತೀರ್ಣದ ಭೂಸ್ವಧೀನ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಹಾಗೆಯೇ ಹಂತ–6ರಡಿ 4736 ಎಕರೆ ವಿಸ್ತೀರ್ಣದ ಭೂಸ್ವಧೀನ ಪ್ರಕ್ರಿಯೆ ನಡೆಯುತ್ತಿದ್ದು, 28(3) ಆಗಿರುತ್ತದೆ ಎಂದು ಸಭೆಗೆ ಮಾಹಿತಿ ವಿವರಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಭೂಸ್ವಾಧೀನ ಪ್ರಕ್ರಿಯೆಯನ್ನು ಚುರುಕುಗೊಳಿಸಬೇಕೆಂದು ತಿಳಿಸಿದರು.

**ಕೈಗಾರಿಕೆಗಳಿಗೆ ನೀರು:–**

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಎತ್ತಿನಹೊಳೆ ಯೋಜನೆಯಿಂದ ವಸಂತನರಸಾಪುರ ಕೈಗಾರಿಕಾ ಪ್ರದೇಶಕ್ಕೆ ನಿಗಧಿಯಾಗಿದ್ದ ನೀರಿನ ಅಲೋಕೇಷನ್ ಅನ್ನು ಸರ್ಕಾರ ವಾಪಸ್ ಪಡೆದಿದ್ದು, ಇದನ್ನು ಗಂಭಿರವಾಗಿ ಪರಿಗಣಿಸಬೇಕಾಗುತ್ತದೆ ಎಂದು ಸಭೆಯ ಗಮನಕ್ಕೆ ತರುತ್ತಾ, ಕೇಂದ್ರ ಸರ್ಕಾರದ ಯೋಜನೆ ಕೈತಪ್ಪುವ ಸಾಧ್ಯತೆಯಿರುವುದರಿಂದ ನೀರಿಬ ಅಲೋಕೇಷನ್ ಬದಲಾವಣೆ ಮಾಡಬಾರದೆಂದು ಸಭೆಯನ್ನು ಒತ್ತಾಯಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಈಗಾಗಲೇ ಸರ್ಕಾರದ ಗಮನ ಸೆಳೆಯಲಾಗಿದೆ, ಮುಂದಿನ ಸಭೆ ವೇಳೆಗೆ ಜಿಲ್ಲೆಯಲ್ಲಿ ಕೈಗಾರಿಕೆಗಳಿಗೆ ಅಗತ್ಯವಿರುವ ನದಿ ನೀರಿನ ಜಿ.ಐ.ಎಸ್ ಪದರದೊಂದಿಗೆ ಮಾಹಿತಿ ನೀಡಲು ಅಧಿಕಾರಿಗಳಿಗೆ ಸೂಚಿಸಿದರು.

<u>**ವಿಮಾನ ನಿಲ್ದಾಣ:–**</u> ಸಭೆಯ ಮಾನ್ಯ ಅಧ್ಯಕ್ಷರು ಮತ್ತು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ವಿಮಾನ ನಿಲ್ದಾಣ ಸ್ಥಾಪನೆಗೆ ಜಾಗದ ಮಂಜೂರಾತಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ ಎಂಬ ಕುರಿತು ಮಾಹಿತಿ ಕೇಳಿದರು. ಜಿಲ್ಲಾಧಿಕಾರಿಗಳು ಮಾತನಾಡಿ, ಈವರೆಗೂ ನಮಗೆ ಲಿಖಿತ ರೂಪದಲ್ಲಿ ಯಾವುದೇ ಮಾಹಿತಿ ಬಂದಿಲ್ಲ, ಪತ್ರ ಬಂದ ತಕ್ಷಣ ವಿಮಾನ ನಿಲ್ದಾಣದ ಬಗ್ಗೆ ಏರ್ ಪೋರ್ಟ್ ಅಥಾರಿಟಿ ಮತ್ತು ಕೆ.ಐ.ಎ.ಡಿ.ಬಿ. ಅಧಿಕಾರಿಗಳನ್ನು ಕರೆಸಿ ಒಮ್ಮೆಗೆ ಪ್ರತ್ಯೇಕ ಸಭೆ ನಡೆಸುವುದಾಗಿ ತಿಳಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಉಡಾನ್ ಯೋಜನೆಯಡಿ ಜಾಗ ನೀಡಿದರೆ ಅವರೇ (ಏರ್‌ಪೋರ್ಟ್) ಕಾಮಗಾರಿ/ಯೋಜನೆ ಮಾಡುತ್ತಾರೆ ಎಚಿದು ಅಭಿಪ್ರಾಯ ವ್ಯಕ್ತಪಡಿಸಿದರು. ಪ್ರತಿಯಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಪ್ರೊಸೀಜರ್ ಓವರ್ ರೂಲ್ ಮಾಡಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಬೇಕು. ಪ್ರಸ್ತುತ ಯಾವುದು ಸೂಟಬಲ್ ಏರಿಯಾ ಎಚಿದು ಇನ್ನೂ ಕಮ್ಯುನಿಕೇಟ್ ಆಗಿಲ್ಲ. ಅದಕ್ಕಾಗಿ ಕಾಯಲಾಗುತ್ತಿದೆ ಎಂದು ಸಭೆಯ ಗಮನಕ್ಕೆ ತರುತ್ತಾ, ಡ್ರೋನ್ ಮುಖಾಂತರ ಏರಿಯಾ ಸರ್ವೆ ಮಾಡಿಸಿ ಅಗತ್ಯ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

<u>**ಕೆಎಸ್‌ಎಸ್‌ಐಡಿಸಿ:**</u>

ರಾಜ್ಯ ಸರ್ಕಾರದ ನಿರ್ದೇಶನದಂತೆ ತುಮಕೂರು ಜಿಲ್ಲೆಯಲ್ಲಿ ಪ್ರತಿ ಗ್ರಾಮಗಳಲ್ಲಿರುವ ಸರ್ಕಾರಿ ಜಮೀನು ಗುರುತಿಸಿ ಜಿ.ಐ.ಎಸ್ ಲೇಯರ್ ಮಾಡಲು ಕೆಎಸ್‌ಎಸ್‌ಐಡಿಸಿ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು. ಮುಂದಿನ ಸಭೆ ವೇಳೆಗೆ ಸೂಕ್ತ ಮಾಹಿತಿಯೊಂದಿಗೆ ಹಾಜರಾಗಲು ಅಧಿಕಾರಿಗಳಿಗೆ ಸೂಚಿಸಿದರು.

**[ಕ್ರಮ: ಅಭಿವೃದ್ಧಿ ಅಧಿಕಾರಿ/ ಕಾರ್ಯಪಾಲಕ ಅಭಿಯಂತರರು, ಕೆ.ಐ.ಎ.ಡಿ.ಬಿ, ತುಮಕೂರು]**

**20. ಲೋಕೋಪಯೋಗಿ ಇಲಾಖೆ:**

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ ಹಿಂದಿನ ಸಭೆಯಲ್ಲಿ ಜಿಲ್ಲೆಯಲ್ಲಿ ಯಾವ ರಸ್ತೆಗಳನ್ನು ಮೇಲ್ದರ್ಗೆರಿಸಬೇಕು ಎಂಬ ಬಗ್ಗೆ ವರದಿ ನೀಡಲು ತಿಳಿಸಲಾಗಿತ್ತು, ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬ ಬಗ್ಗೆ ಮಾಹಿತಿ ನೀಡಲು ಕೇಳಿದರು.

ಸಭೆಯಲ್ಲಿ ಉಪಸ್ಥಿತರಿದ್ದ ಕಾರ್ಯಪಾಲಕ ಇಂಜಿನಿಯರ್‌ರವರು ಮಾತನಾಡಿ, ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮುಂದುವರೆದು ಮಾತನಾಡುತ್ತಾ, ಕಳೆದ ಸಭೆಯ ತೀರ್ಮಾನದಂತೆ ಅಪ್‌ಗ್ರೇಡೇಷನ್ ಬಗ್ಗೆ ಕ್ರಮವಹಿಸಲಾಗಿದ್ದು, ರಸ್ತೆ ಅಗಲೀಕರಣದ ಕುರಿತು ರಾಷ್ಟ್ರೀಯ ಹೆದ್ದಾರಿ, ಎನ್.ಹೆಚ್.ಎ.ಐ. ಪಿಎಂಜಿಎಸ್‌ವೈ, ಪಂಚಾಯತ ರಾಜ್ ಇಂಜನಿಯರಿಂಗ್, ಜಿಲ್ಲಾನಗರಾಭಿವೃದ್ಧಿ ಕೋಶ ಹೀಗೆ ಅಗತ್ಯವಿರುವ ಇಲಾಖೆಗಳ ಅಧಿಕಾರಿಗಳೊಂದಿಗೆ ಕೂಡಲೇ ಸಭೆ ನಡೆಸಿ ತೀರ್ಮಾನಿಸುವುದಾಗಿ ಸಭೆಗೆ ಮಾಹಿತಿ ವಿವರಿಸಿದರು.

ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಚಿಕ್ಕನಹಳ್ಳಿ, ಚೇಳೂರು ಮತ್ತು ಮಾಯಸಂದ್ರ ಗ್ರಾಮಗಳ ರಸ್ತೆ ಸಂಪರ್ಕದ ಬಗ್ಗೆ ಮಾಹಿತಿ ಪಡೆದರು. ಮಾನ್ಯ ವಿಧಾನ ಪರಿಷತ್ ಸದಸ್ಯರು ಮಾತನಾಡುತ್ತಾ, ರಾಷ್ಟ್ರೀಯ ಹೆದ್ದಾರಿಗಳನ್ನು ಘೋಷಣೆ ಮಾಡುತ್ತಾರೆ, ಆದರೆ ಸಂಖ್ಯೆಯನ್ನು ನಮೂದಿಸುವುದಿಲ್ಲ. ಈ ನಿಟ್ಟಿನಲ್ಲಿ ಎನ್.ಸಿ ಮತ್ತು ಎಸ್.ಸಿ ಅಡಿ ಸಾಕಷ್ಟು ಪ್ರಕರಣಗಳು ಬಾಕಿ ಉಳಿದಿವೆ ಎಂದು ಸಭೆಯ ಗಮನಕ್ಕೆ ತಂದರು. ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಹುಳಿಯಾರಿನಿಂದ ಶಿರಾ ತಾಲ್ಲೂಕಿನವರೆಗೆ ಮತ್ತು ಶಿರಾ ತಾಲ್ಲೂಕಿನಿಂದ ಕೋಲಾರ ಜಿಲ್ಲೆಯವರೆಗೆ ಹೆದ್ದಾರಿ ನಿರ್ಮಾಣದ ಕುರಿತು ಮಾಹಿತಿ ಪಡೆದರು.

**[ಕ್ರಮ: ಕಾರ್ಯಪಾಲಕ ಅಭಿಯಂತರರು, ಪಿ.ಡಬ್ಲ್ಯೂಡಿ, ತುಮಕೂರು/ ಮಧುಗಿರಿ]**

**21. ಪಂ.ರಾ.ಇಂ.ವಿಭಾಗ, ತುಮಕೂರು:**

ಕಾರ್ಯಪಾಲಕ ಇಂಜಿನಿಯರ್‌ರವರು ಮಾತನಾಡಿ, ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಅಟಲ್ ಭೂಜಲ್ ಯೋಜನೆಯಡಿ ಆಯ್ಕೆಯಾಗಿರುವ 06 ತಾಲ್ಲೂಕುಗಳನ್ನು ಹೊರತುಪಡಿಸಿ ಉಳಿದ ನಾಲ್ಕು ತಾಲ್ಲೂಕುಗಳನ್ನು ಜಲಾಮೃತ ಯೋಜನೆಯಡಿ ಅನುಷ್ಠಾನಕ್ಕೆ ಕ್ರಮವಹಿಸಿರುವ ಕುರಿತು ಮುಂದಿನ ಸಭೆಯಲ್ಲಿ ಮಾಹಿತಿ ನೀಡಲು ಸೂಚಿಸಿದರು.

**[ಕ್ರಮ: ಕಾರ್ಯಪಾಲಕ ಅಭಿಯಂತರರು, ಪಿ.ಆರ್.ಇ.ಡಿ, ತುಮಕೂರು]**

**22. ಪಂ.ರಾ.ಇಂ.ವಿಭಾಗ, ಮಧುಗಿರಿ:**

ಕಾರ್ಯಪಾಲಕ ಇಂಜಿನಿಯರ್‌ರವರು ಮಾತನಾಡಿ, ಇಲಾಖಾ ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಸಭೆಯ ಮಾನ್ಯ ಅಧ್ಯಕ್ಷರು ಮತ್ತು ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ, ಶೌಚಾಲಯ ನಿರ್ಮಾಣ ಕಾಮಗಾರಿಯ ಬಗ್ಗೆ ಮಾಹಿತಿ ಪಡೆದರು. ಪೂರಕವಾಗಿ ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಜಾಗದ ಕೊರತೆಯಿರುವ ಬಗ್ಗೆ ವೈಯಕ್ತಿಕ ಗಮನಹರಿಸಿ ಮಾನ್ಯ ಜಿಲ್ಲಾಧಿಕಾರಿಯವರೊಂದಿಗೆ ಸಮಾಲೋಚಿಸಿ, ಲೇಯರ್‌ಗಳನ್ನು ಮಾಡಿಕೊಳ್ಳಬೇಕೆಂದು ಕಾರ್ಯಪಾಲಕ ಇಂಜಿನಿಯರ್‌ರವರಿಗೆ ತಿಳಿಸಿದರು.

**[ಕ್ರಮ: ಕಾರ್ಯಪಾಲಯ ಅಭಿಯಂತರರು, ಪಿ.ಆರ್.ಇ.ಡಿ, ಮಧುಗಿರಿ]**

ಜಿ.ಪಂ.ಮ.೩೦೫೭೭

**23. ಕರ್ನಾಟಕ ರಿಮೋಟ್ ಸೆನ್ಸಿಂಗ್ ಅಪ್ಲಿಕೇಷನ್ ಸೆಂಟರ್:**

ಮಾನ್ಯ ಅಧ್ಯಕ್ಷರು ಮಾತನಾಡಿ, ತುಮಕೂರು ಜಿಐಎಸ್ ಪೋರ್ಟಲ್‌ಅನ್ನು ಸಾರ್ವಜನಿಕರು ವೀಕ್ಷಣೆ ಮಾಡಲು ಅನೂಕೂಲ ಮಾಡಲು ಸೂಚಿಸಿದರು. ಪ್ರತಿಯೊಂದು ಯೋಜನೆಯ ಬಗ್ಗೆ ಸಾರ್ವಜನಿಕರು ಕಾಮೆಂಟ್ಸ್ ಮಾಡಲು ಅವಕಾಶ ಕಲ್ಪಿಸಲು ಸೂಚಿಸಿದರು, ಭಾಗವಹಿಸಿದ್ದ ಅಧಿಕಾರಿಗಳು ಕಾರ್ಯಕ್ರಮಗಳ ಪ್ರಗತಿ ವರದಿಯನ್ನು ಸಭೆಗೆ ವಿವರಿಸಿದರು. ಮುಂದಿನ ಸಭೆ ವೇಳೆಗೆ ಸೂಕ್ತಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಮುಂದಿನ ಸಭೆಯಿಂದ ಇಲಾಖಾವಾರು, ಯೋಜನಾವಾರು ಚರ್ಚಿಸಿ, ಯಾವ ಅಧಿಕಾರಿ ಸಭೆಗೆ ಹಾಜರಾಗಿಲ್ಲ ಎಂಬ ನಮೂದಿಸುವಂತೆ ಜಿಐಎಸ್ ಪೋರ್ಟಲ್‌ನಲ್ಲಿ ವ್ಯವಹರಿಸಲು ಸೂಚಿಸಿದರು.

[ಕ್ರಮ: **KSRSAC, ಬೆಂಗಳೂರು/ Project Associate, ZP, Tumkur**]

**24. ಮೀನುಗಾರಿಕಾ ಇಲಾಖೆ:**

ಹಿರಿಯ ಸಹಾಯಕ ನಿರ್ದೇಶಕರು ಮಾತನಾಡಿ, ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ದಿಶಾ ಸಮಿತಿಯ ಮಾನ್ಯ ಅಧ್ಯಕ್ಷರು ಮಾತನಾಡಿ, ಮೀನುಮರಿ ಪಾಲನೆಗೆ ಜಿಲ್ಲೆಯಲ್ಲಿ ಎಷ್ಟು ಕೆರೆಗಳನ್ನು ಪಡೆಯಲಾಗಿದೆ ಎಂಬ ಕುರಿತು ಮಾಹಿತಿ ಪಡದು, ಗರಿಷ್ಠ ಎಲ್ಲಾ ನೀರು ಲಭ್ಯವಿರುವ ಎಲ್ಲಾ ಕೆರೆಗಳಿಗೂ ಮೀನುಮರಿಳನ್ನು ಬಿಡಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ನೀಲಿ ಕ್ರಾಂತಿ ಯೋಜನೆಯಡಿ ನಮ್ಮ ಜಿಲ್ಲೆಯ ಮಾರ್ಕೋನಹಳ್ಳಿ ಮತ್ತು ಮಂಗಳಾ ಕೆರೆಗಳಿಗೆ ಯೋಜನೆಯನ್ನು ರೂಪಿಸಬಹುದಲ್ಲವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಕುಣಿಗಲ್ ಕೆರೆ, ಮಾರ್ಕೋನಹಳ್ಳಿ ಮತ್ತು ಮಂಗಳಾ ಕೆರೆಗಳಿಗೆ ಯೋಜನೆಯನ್ನು ರೂಪಿಸಬೇಕೆಂದು ಹಿರಿಯ ಸಹಾಯಕ ನಿರ್ದೇಶಕರಿಗೆ ತಿಳಿಸಿದರು. ಪೂರಕವಾಗಿ ಮಾನ್ಯ ವಿಧಾನಪರಿಷತ್ ಸದಸ್ಯರು ಮತ್ತು ಸಮಿತಿಯ ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಕುರಿತು ಪಿಪಿಟಿ ದಾಖಲೆಯನ್ನು ಪ್ರದರ್ಶಿಸಬೇಕೆಂದು ಮೀನುಗಾರಿಕಾ ಹಿರಿಯ ಸಹಾಯಕ ನಿರ್ದೇಶಕರಿಗೆ ತಿಳಿಸಿದರು.

ಮುಂದಿನ ಸಭೆಯಲ್ಲಿ ಮುಂದಿನ 2050 ವರ್ಷದವರಿಗೆ ಜಿಲ್ಲೆಯಲ್ಲಿ ಕೈಗೊಳ್ಳಬಹುದಾದ ವಿಷನ್ ಡಾಕ್ಯುಮೆಂಟ್ ತಯಾರಿಸಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

**[ಕ್ರಮ: ಹಿರಿಯ ಮೀನುಗಾರಿಕೆ ಉಪ ನಿರ್ದೇಶಕರು, ತುಮಕೂರು]**

**25. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ತುಮಕೂರು:**

ನಿಗಮದ ಅಧಿಕಾರಿಯವರು ಮಾತನಾಡಿ, ತುಮಕೂರು ಸ್ಮಾರ್ಟ್‌ಸಿಟಿ ವತಿಯಿಂದ ತುಮಕೂರು ಬಸ್ ನಿಲ್ದಾಣದ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಂಡಿದ್ದು, ಕೋವಿಡ್–19ರ ಹಾವಳಿಯಿಂದಾಗಿ ಕಾಮಗಾರಿ ಸ್ಥಗಿತಗೊಂಡಿದ್ದು, ಚುರುಕುಗೊಳಿಸಲಾಗುವುದು ಎಂದು ಸಭೆಗೆ ಮಾಹಿತಿ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ನಿಗಮದ ಎಲ್ಲಾ ಕಾಮಗಾರಿಗಳನ್ನು ತುಮಕೂರು ಜಿ.ಐ.ಎಸ್ ಪೋರ್ಟಲ್‌ನಲ್ಲಿ ಲೇಯರ್ಸ್ ಮಾಡಿಸಬೇಕೆಂದು ತಿಳಿಸಿದರು.

**[ಕ್ರಮ: ವಿಭಾಗೀಯ ಸಂಚಾರಿ ನಿಯಂತ್ರಕರು, ಕೆಎಸ್‌ಆರ್‌ಟಿಸಿ, ತುಮಕೂರು]**

**26. ಎನ್.ಆರ್.ಎಲ್.ಎಂ:**

ಮಾನ್ಯ ಯೋಜನಾ ನಿರ್ದೇಶಕರು ಮಾತನಾಡಿ, ಎನ್.ಆರ್.ಎಲ್.ಎಂ. ಯೋಜನೆಯ ಅನುಷ್ಠಾನಕ್ಕೆ 2020–21ನೇ ಸಾಲಿಗೆ ಗುರಿ ನಿಗದಿಪಡಿಸಿದ್ದು, ಅನುದಾನ ಬಿಡುಗಡೆ ಮಾಡಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಸ್ತ್ರೀ–ಶಕ್ತಿ ಸಂಘಗಳ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆಗೊಳಿಸಬೇಕೆಂದು ತಿಳಿಸಿದರಲ್ಲದೆ, ಬ್ಯಾಕ್‌ವರ್ಡ್ ಲಿಂಕೇಜ್ ಬಗ್ಗೆ ಮಾಹಿತಿ ಒದಗಿಸಬೇಕೆಂದು ತಿಳಿಸಿದರು.

ಪ್ರತಿಯಾಗಿ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ, ಈ ಸಂಬಂಧ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾಗಿದ್ದು, ಸರ್ಕಾರದಿಂದ ಅನುದಾನ ಬಿಡುಗಡೆಯಾದ ಕೂಡಲೇ ಪ್ರಾರಂಭಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಪೂರಕವಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಸಂಪನ್ಮೂಲ ವ್ಯಕ್ತಿಗಳನ್ನು ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು. ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಕ್ಲಸ್ಟರ್‌ವೈಸ್(ರಾಗಿ ಬಿಸ್ಕತ್, ಬಿಸ್ಕತ್, ಚಿಪ್ಸ್ ಇತ್ಯಾದಿ) ಲೇಯರ್ಸ್ ಮಾಡಿಸಬೇಕೆಂದು ಯೋಜನಾ ನಿರ್ದೇಶಕರಿಗೆ ತಿಳಿಸಿದರು. ಮುಂದುವರೆದು ಮಾತನಾಡುತ್ತಾ, ಮುಂದಿನ ಸಭೆಯಲ್ಲಿ ಈ ಯೋಜನೆಯನ್ನು ಲಾಂಚ್ ಮಾಡಲು ತಿಳಿಸಿದರು.

**ಕೃಷಿ ಮಾರಾಟ ಇಲಾಖೆ/ ಎಪಿಎಂಸಿ:**

**ತುಮಕೂರು ನಗರದ ವಿನಾಯಕ ಮಾರುಕಟ್ಟೆ:–** ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ತುಮಕೂರು ನಗರದ ವಿನಾಯಕ ಮಾರುಕಟ್ಟೆ ಬಳಿ ಜಾಗ ನೀಡಲು ತೀರ್ಮಾನಿಸಿದ್ದುದರ ಕುರಿತು ಪ್ರಸ್ತಾಪಿಸಿದರು. ಪ್ರತಿಯಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಸದರಿ ಜಾಗವು ನಗರದ ಕೇಂದ್ರ ಭಾಗದಲ್ಲಿದ್ದು, ಹಣ್ಣು ಮತ್ತು ಹೂವಿನ ಮಾರುಕಟ್ಟೆಗೆ ಉತ್ತಮ ಜಾಗವಾಗಿರುವುದರಿಂದ ಅದನ್ನು ಸ್ಮಾರ್ಟ್‌ಸಿಟಿ ವಶಕ್ಕೆ ನೀಡಲು ಅಗತ್ಯ ಕ್ರಮ ವಹಿಸಬೇಕೆಂದು ಕೃಷಿ ಉತ್ಪನ್ನ ಮಾರುಕಟ್ಟೆಯ ಉಪನಿರ್ದೇಶಕರಿಗೆ ತಿಳಿಸಿದರು. ಪ್ರತಿಯಾಗಿ ಉಪನಿರ್ದೇಶಕರು ಮಾತನಾಡಿ, ಸದರಿ ಜಾಗದ ಸಂಬಂಧ ಪ್ರಕರಣ ನ್ಯಾಯಾಲಯದಲ್ಲಿರುವುದಾಗಿ ಸಭೆಯ ಗಮನಕ್ಕೆ ತಂದರು. ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ವ್ಯಾಜ್ಯವನ್ನು ತಂದಲ್ಲಿ ಸಂಬಂಧಪಟ್ಟ ಸಚಿವರು ಮತ್ತು ಮಾನ್ಯಮುಖ್ಯಮಂತ್ರಿಯವರೊಂದಿಗೆ ಸಮಾಲೋಚಿಸಿ ಸಮಸ್ಯೆಯನ್ನು ಇತ್ಯರ್ಥಪಡಿಸಲಾಗುವುದು. ಇದರಿಂದಾಗಿ ಸರ್ಕಾರದ ವತಿಯಿಂದ ಒಳ್ಳೆಯ ಮಾರುಕಟ್ಟೆ ನಿರ್ಮಾಣವಾದಂತಾಗುತ್ತದೆ ಎಂದು ಉಪನಿರ್ದೇಶಕರಿಗೆ ತಿಳಿಸಿದರು.

[**ಕ್ರಮ: ಯೋಜನಾ ನಿರ್ದೇಶಕರು, ಜಿ.ಪಂ, ತುಮಕೂರು**]

**27. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:**

ಉಪನಿರ್ದೇಶಕರು ಮಾತನಾಡಿ, ಇಲಾಖಾ ಕಾರ್ಯಕ್ರಮಗಳ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು. ಮುಂದುವರೆದು, ಕೋವಿಡ್–19ರ ಹಾವಳಿಯಿಂದಾಗಿ ಅಂಗನವಾಡಿ ಮಕ್ಕಳಿಗೆ ಮತ್ತು ಗರ್ಭಿಣಿ/ಬಾಣಂತಿಯರಿಗೆ ಮನೆಗೆ ಆಹಾರ ವಿತರಣೆ ಮಾಡಲಾಗುತ್ತಿದೆ; ಜಿಲ್ಲೆಯಲ್ಲಿ ಪ್ರಸ್ತುತ 4109 ಅಂಗನವಾಡಿ ಕೇಂದ್ರಗಳು ಅಸ್ತಿತ್ವದಲ್ಲಿವೆ. ಈ ಪೈಕಿ 2781 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳನ್ನು ಹೊಂದಿವೆ; 569 ಅಂಗನವಾಡಿ ಕೇಂದ್ರಗಳಿಗೆ ನಿವೇಶನ ಲಭ್ಯವಿರುತ್ತದೆ; 2636 ಅಂಗನವಾಡಿ

ಕೇಂದ್ರಗಳಿಗೆ ಶೌಚಾಲಯ ನಿರ್ಮಿಸಲಾಗಿದೆ; 1520 ಅಂಗನವಾಡಿ ಕೇಂದ್ರಗಳಿಗೆ ನೀರಿನ ಸೌಲಭ್ಯ ಕಲ್ಪಿಸಲಾಗಿದೆ; 816 ಅಂಗನವಾಡಿ ಕೇಂದ್ರಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸಲಾಗಿದೆ; ಉಳಿದ ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಿಯಾ ಯೋಜನೆ ರೂಪಿಸಲಾಗಿದೆ ಎಂದು ಸಭೆಗೆ ಮಾಹಿತಿ ವಿವರಿಸಿದರು.

ಪೂರಕವಾಗಿ ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ವಿದ್ಯುತ್ ಸಂಪರ್ಕಕ್ಕೆ ಬಾಕಿ ಇರುವ ಎಲ್ಲಾ ಅಂಗನವಾಡಿ ಕೇಂದ್ರ ಕಟ್ಟಡಗಳಿಗೂ ವಿದ್ಯುತ್ ಸಂಪರ್ಕ ಕಲ್ಪಿಸಲು ಮತ್ತು ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ಅಗತ್ಯ ಕ್ರಮವಹಿಸಬೇಕೆಂದು ಉಪನಿರ್ದೇಶಕರಿಗೆ ತಿಳಿಸಿದರು. ದಿಶಾ ಸಮಿತಿಯ ಸದಸ್ಯಕಾರ್ಯದರ್ಶಿರವರು ಮಾತನಾಡಿ ಶೇಕಡ 100 ರ ಗುರಿ ಸಾಧಿಸಲು ಅಗತ್ಯಕ್ರಮಕೈಗೊಳ್ಳಲಾಗುವುದು ಎಂದು ಸಭೆಯ ಗಮನಕ್ಕೆ ತಂದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್ ರವರು ಮಾತನಾಡಿ, ಅಂಗನವಾಡಿ ಕಟ್ಟಡಗಳಿಗೆ, ಗ್ರಾಮ ಪಂಚಾತಿಯಿತಿಗಳ ಕಟ್ಟಡಕ್ಕೆ ಸ್ವಂತ ಜಾಗ ನೀಡಬೇಕೆಂದು ಸಭೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಕೋರಿದರು. ಪೂರಕವಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಜಾಗ ನೀಡುತ್ತಿರುವುದಾಗಿ ತಿಳಿಸಿ, ಆದಷ್ಟು, ಗ್ರಾಮದ ಒಳಗೇ ಇರುವಂತಹ ಜಾಗ ನೀಡಬೇಕಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಪೂರಕವಾಗಿ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಶೇ.95%ರಷ್ಟು ಜಾಗ ಲಭ್ಯವಿರುವುದಾಗಿ ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಜಿಐಎಸ್ ಪೋರ್ಟಲ್‌ನಲ್ಲಿ ಲೇಯರ್ಸ್ ಮಾಡಿಸಬೇಕೆಂದು ಉಪ ಕಾರ್ಯದರ್ಶಿರವರಿಗೆ ತಿಳಿಸಲಾಯಿತು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಅಕ್ಷರ ದಾಸೋಹ ಕಾರ್ಯಕ್ರಮದಡಿ ಅಂಗನವಾಡಿಗಳ ಪ್ರಸ್ತುತ ಅವಶ್ಯವಿರುವ 577 ಅಡುಗೆ ಕೋಣೆಗಳನ್ನು ನರೇಗಾ ಕಾರ್ಯಕ್ರಮದಡಿ ಅನುಷ್ಟಾನಗೊಳಿಸಬೇಕೆಂದು ಅಭಿಪ್ರಾಯ ವ್ಯಕ್ತಪಡಿಸಿದರು. ಪೂರಕವಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ಸದರಿ 577 ಅಡುಗೆ ಕೋಣೆಗಳನ್ನು ನರೇಗಾ ಕಾರ್ಯಕ್ರಮದಡಿ ಅನುಷ್ಟಾನಗೊಳಿಸಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ಎಷ್ಟೋ ಅಂಗನವಾಡಿ ಕಟ್ಟಡಗಳಲ್ಲಿ ವಿದ್ಯುತ್ ಬಿಲ್ ಪಾವತಿಸದೆ ಸಂಪರ್ಕ ಕಡಿತವಾಗಿರಬಹುದೆಂದು ಅಭಿಪ್ರಾಯ ವ್ಯಕ್ತಪಡಿಸಿ, ಆ ಕುರಿತು ಪರಿಶೀಲಿಸಬೇಕೆಂದು ಉಪನಿರ್ದೇಶಕರಿಗೆ ತಿಳಿಸಿದರಲ್ಲದೆ, ಅಂಗನವಾಡಿ ಕೇಂದ್ರ ಕಟ್ಟಡ ನಿರ್ಮಾಣಕ್ಕೆ ಗ್ರಾಮದ ಒಳಗೇ ಜಾಗ ನೀಡಬೇಕೆಂದು ಮಾನ್ಯ ಜಿಲ್ಲಾಧಿಕಾರಿಯವರಿಗೆ ತಿಳಿಸಿದರು. ಪ್ರತಿಯಾಗಿ ಮಾನ್ಯ ಜಿಲ್ಲಾಧಿಕಾರಿಯವರು ಮಾತನಾಡಿ, ರಸ್ತೆ ಬದಿ ಇರುವ ಜಾಗವನ್ನು ಗುರುತಿಸಿ, ದಾನಿಗಳನ್ನು ಸಂಪರ್ಕಿಸಿದರೆ, ಜಾಗ ನೀಡುತ್ತಾರೆ; 30x40 ಅಡಿ ಜಾಗ ದೊರೆತರೆ ಅಂಗನವಾಡಿ ಕಟ್ಟಡ ನಿರ್ಮಿಸಲು ಜಾಗ ಸಾಕಾಗುತ್ತದೆಯಾದ್ದರಿಂದ ಈ ಕುರಿತು ಹೆಚ್ಚಿನ ಒತ್ತು ನೀಡಿ ಸಂಬಂಧಪಟ್ಟ ಗ್ರಾಮಲೆಕ್ಕಿಗರಿಗೆ ಮಾನ್ಯ ತಹಶೀಲ್ದಾರ್‌ರವರುಗಳ ಮೂಲಕ ಸೂಕ್ತ ಸೂಚನೆ ನೀಡಿ ಮುಂದಿನ ಅಗತ್ಯ ಕ್ರಮವಹಿಸಬೇಕೆಂದು ಉಪನಿರ್ದೇಶಕರಿಗೆ ತಿಳಿಸಿದರು.

**[ಕ್ರಮ: ಉಪ ನಿರ್ದೇಶಕರು, ಮಹಿಳಾ & ಮಕ್ಕಳ ಕಲ್ಯಾಣ ಇಲಾಖೆ, ತುಮಕೂರು]**

28. **ಅಧಿಕಾರಿಗಳ ಗೈರು ಹಾಜರಿ**

ಮಾನ್ಯ ವಿಧಾನಪರಿಷತ್ ಸದಸ್ಯರು ಮಾತನಾಡಿ, ರಾಜ್ಯ ಸರ್ಕಾರಕ್ಕೆ ಸಾಕಷ್ಟು ಪ್ರಸ್ತಾವನೆಗಳು ಸಲ್ಲಿಕೆಯಾಗುತ್ತವೆ. ಆದರೆ, ತುಮಕೂರು ಜಿಲ್ಲೆಗೆ ಸಂಬಂಧಪಟ್ಟಂತೆ ಅನುಮೋದನೆಗೆ ಬಾಕಿಯಿರುವ ಪ್ರಸ್ತಾವನೆಗಳ ಬಗ್ಗೆ ಪತ್ರ ವ್ಯವಹಾರ ನಡೆಸಿ, ಸದರಿ ಬಾಕಿ ಪ್ರಸ್ತಾವನೆಗಳಿಗೆ ಅನುಮೋದನೆ ದೊರಕಿಸಿಕೊಟ್ಟು ಯೋಜನೆಗಳು ಕಾರ್ಯಗತವಾಗುವ ನಿಟ್ಟಿನಲ್ಲಿ ಕ್ರಮ ಗಮನಹರಿಸಬೇಕೆಂದು ಸಮಿತಿಯ ಮಾನ್ಯ ಅಧ್ಯಕ್ಷರನ್ನು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್‌ರವರು ಮಾತನಾಡಿ, ಇಂದಿನ ಸಭೆಗೆ ಸಾಕಷ್ಟು ಇಲಾಖೆಗಳ ಅಧಿಕಾರಿಗಳು ಗೈರುಹಾಜರಾಗಿರುವುದರಿಂದ ವಸತಿ, ಮೆಟ್ರೋ ಮತ್ತು ಸಬ್‌ಅರ್ಬನ್ ರೈಲು, ರ್ಯಲ್ವೆ ಮೇಲು ಸೇತುವೆ/ಕೆಳಸೇತುವೆ, ಪ್ರವಾಸೋದ್ಯಮ, ಸಂಸದರ ಆದರ್ಶಗ್ರಾಮ ಯೋಜನೆ, ಅಟಲ್ ಭೂಜಲ್ ಇತರೆ ಯೋಜನೆಗಳ ಕುರಿತು ಚರ್ಚೆಯಾಗಿಲ್ಲವಾದ್ದರಿಂದ, ಕೇಂದ್ರ ಪುರಸ್ಕೃತ ಯೋಜನೆಗಳನ್ನು ಅನುಷ್ಠಾನಗೊಳಿಸುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಮುಂದಿನ ಸಭೆಗೆ ಕಡ್ಡಾಯವಾಗಿ ಕರೆಸಲೇಬೇಕೆಂದು ಮಾನ್ಯ ಜಿಲ್ಲಾಧಿಕಾರಿಯವರಿಗೆ ತಿಳಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡಿ ಮುಂದಿನ ಸಭೆಗೆ ಯಾವ ಯೋಜನೆಗಳ ಬಗ್ಗೆ ಚರ್ಚಿಸಲು, ಯಾವ ಇಲಾಖಾ ಅಧಿಕಾರಿಗಳನ್ನು ಆಹ್ವಾನಿಸಬೇಕು ಎಂಬ ಬಗ್ಗೆ ಪಟ್ಟಿ ನೀಡಲು ಮಾನ್ಯ ಸದಸ್ಯರಾದ ಶ್ರೀ ಕುಂದರನಹಳ್ಳಿ ರಮೇಶ್ ರವರಿಗೆ ಸೂಚಿಸಿದರು. ದಿಶಾ ಸಮಿತಿಯ ಎಲ್ಲಾ ವ್ಯವಹಾರಗಳನ್ನು ಡಿಜಿಟೈಲಸ್ ಮಾಡಲು ಸೂಚಿಸಿದರು. ಜಿಲ್ಲಾಧಿಕಾರಿಗಳು ಸಹಮತ ವ್ಯಕ್ತಡಿಸಿದರು.

29. **ಆರ್ಥಿಕ ವ್ಯವಹಾರಗಳ ಇಂಡೆಕ್ಸ್ ಮತ್ತು ವಿವಿಧ ಬ್ಯಾಂಕ್ ಗಳಲ್ಲಿ ಠೇವಣಿ ಇಟ್ಟಿರುವ ಬಗ್ಗೆ.**

ಮಾನ್ಯ ಅಧ್ಯಕ್ಷರು ಮಾತನಾಡಿ ಜಿಲ್ಲೆಗೆ ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಿಂದ 2019-2020 ನೇ ವರ್ಷದಲ್ಲಿ ಮಂಜೂರಾದ ಹಣ, ಖರ್ಚುಮಾಡಿರುವ ಹಣ, ಉಳಿತಾಯದ ಹಣ, ಬಿಡುಗಡೆಯಾಗಿರುವ ಹಣ ಮತ್ತು ವಿವಿಧ ಬ್ಯಾಂಕ್‌ಗಳಲ್ಲಿ ಠೇವಣಿ ಇಟ್ಟಿರುವ ಮೊತ್ತದ ಆರ್ಥಿಕ ವ್ಯವಹಾರಗಳ ಇಂಡೆಕ್ಸ್ ಮತ್ತು ವಿವಿಧ ಬ್ಯಾಂಕ್‌ಗಳಲ್ಲಿ ಠೇವಣಿ ಇಟ್ಟಿರುವ ಇಲಾಖಾವಾರು ಇಂಡೆಕ್ಸ್ ನೀಡಲು ಅಧಿಕಾರಿಗಳಿಗೆ ಸೂಚಿಸಿದರು.

**[ಕ್ರಮ: ಜಿಲ್ಲಾ ಮಟ್ಟದ ಎಲ್ಲಾ ಇಲಾಖಾಧಿಕಾರಿಗಳು, ತುಮಕೂರು ಜಿಲ್ಲೆ]**

30. **ಅಧ್ಯಕ್ಷರ ನುಡಿ**

ಸಭೆಯ ಮಾನ್ಯ ಅಧ್ಯಕ್ಷರು ಮಾತನಾಡಿ, ಸತತ 4 ಗಂಟೆಗಳ ಕಾಲ ನಡೆದ ಚರ್ಚೆಯಲ್ಲಿ ಭಾಗವಹಿಸಿ, ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದಗಳನ್ನು ತಿಳಿಸಿದರಲ್ಲದೆ, ಇದೇ ರೀತಿ ಸಹಕರಿಸಿದರೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹೊಂದಾಣಿಕೆಯೊಂದಿಗೆ ಮುಂದಿನ 3-4 ವರ್ಷಗಳಲ್ಲಿ ಕೈಗೊಳ್ಳಬಹುದಾಗಿರುವ ಎಲ್ಲಾ ಯೋಜನೆಗಳ ಹೊಸ ಪ್ರಸ್ತಾವನೆಗಳ ಬಗ್ಗೆಯೂ ಸಮಾಲೋಚನೆ ನಡೆಸಲು ಪೂರಕ ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.

ಇಂದಿನ ಸಭೆಗೆ ಗೈರು ಹಾಜರಾಗಿರುವ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಕಾರಣ ಕೇಳಿ ನೋಟೀಸ್ ಜಾರಿಗೊಳಿಸಬೇಕೆಂದು ಮಾನ್ಯ ಜಿಲ್ಲಾಧಿಕಾರಿಯವರಿಗೆ ತಿಳಿಸಿದರಲ್ಲದೆ, ಒಂದು ವೇಳೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಗೆ ಬರಲಾಗದಿದ್ದಲ್ಲಿ, ಸೂಕ್ತ ಕಾರಣದೊಂದಿಗೆ, ಅವರ ಸಹಾಯಕರನ್ನಾದರೂ ಪೂರ್ಣ ಮಾಹಿತಿಯೊಂದಿಗೆ ಸಭೆಗೆ ಕಳುಹಿಸಿಕೊಡಬೇಕು ಎಂದರು. ಹಾಗೆಯೇ ಮಾನ್ಯ ಶಾಸಕರುಗಳೂ ಸಹ ಈ ಸಭೆಗೆ ಹಾಜರಾಗಿದ್ದರೆ ಚರ್ಚೆಗೆ ಅನುಕೂಲವಾಗುತ್ತಿತ್ತು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ನಂತರ ಮಾತನಾಡಿ, ಕೇಂದ್ರ ಪುರಸ್ಕೃತ ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರದಿಂದ ನೇರವಾಗಿ ಇಲಾಖೆಗಳಿಗೆ ಬಿಡುಗಡೆಯಾಗುವ ಅನುದಾನವನ್ನು ಹೇಗೆ ವೆಚ್ಚ ಭರಿಸಬೇಕು ಎಂಬ ಬಗ್ಗೆ ಮಾರ್ಗದರ್ಶನ ನೀಡುವುದೇ ದಿಶಾ ಸಭೆಯ ಮೂಲ ಉದ್ದೇಶವಾಗಿರುವುದರಿಂದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಆಧ್ಯತೆ ಮೇಲೆ ಈ ಸಭೆಗೆ ಹಾಜರಾಗಲೇಬೇಕು ಎಂದು ಅಧಿಕಾರಿಗಳಿಗೆ ಕಟ್ಟು-ನಿಟ್ಟಿನ ಸೂಚನೆ ನೀಡಿದರು. ಹಾಗೂ ಎಲ್ಲಾ ಇಲಾಖೆಗಳು ಎಲ್ಲಾ ಯೋಜನೆಗಳನ್ನು ಜಿ.ಐ.ಎಸ್ ಪೋರ್ಟಲ್‌ನಲ್ಲಿ ತ್ವರಿತವಾಗಿ ಆರೋಹಿಸಲು ಕ್ರಮ ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

ಅಂತಿಮವಾಗಿ, ಚರ್ಚಿಸತಕ್ಕ ವಿಷಯಗಳು ಮುಕ್ತಾಯಗೊಂಡಿದ್ದರಿಂದ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಜಿ.ಎಸ್. ಬಸವರಾಜ್)
ಅಧ್ಯಕ್ಷರು,
ಜಿಲ್ಲಾ ಮಟ್ಟದ ದಿಶಾ ಸಮಿತಿ ಹಾಗೂ
ಲೋಕಸಭಾ ಸದಸ್ಯರು, ತುಮಕೂರು ಲೋಕಸಭಾ ಕ್ಷೇತ್ರ.